ವಿಜಯಪುರ | ಸಂಪುಟ 04 | ಸಂಚಿಕೆ 123 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily ಜನಪರ-ಜೀವಪರ ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ Editor: Indushekhar Manur

editor.udayarashmi@gmail.com RNI NO: KARKAN/2023/86203 ಶನಿವಾರ, ಜುಲೈ, 04, 2026

"ಸರ್ಕಾರಿ ಶಾಲೆಯಲ್ಲಿ ಕಲಿಯುವ ಮಕ್ಕಳು ಉತ್ತಮ ಶಿಕ್ಷಣ ಪಡೆಯಲಿ ಎಂಬ ಆಶಯದಿಂದ ಸಿ ಎಸ್ ಆರ್ ಅನುದಾನದಲ್ಲಿ ಅನೇಕ ಅಭಿವೃದ್ಧಿ ಕಾರ್ಯ ಕೈಗೊಳ್ಳಲಾಗುವುದು. ಶಾಲಾ ಬ್ಯಾಗ್ ಜೊತೆಗೆ ಮತಕ್ಷೇತ್ರದ ಎಲ್ಲಾ ಶಾಲೆಗಳು ಹೊಸ ಕಟ್ಟಡ ಹಾಗೂ ಸ್ಮಾರ್ಟ್‌ಕ್ಲಾಸ್ ಹೊಂದಲಿವೆ."



■ ಎಂ.ಬಿ.ಪಾಟೀಲ
ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರು

## ರಸ್ತೆ ಅಪಘಾತ: ಸ್ಥಳದಲ್ಲೇ ಓರ್ವನ ಸಾವು




■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯ ಚಡಚಣ ತಾಲೂಕಿನ ಸೂರ್ಯ ಲಾಡ್ಜ್ ಸಮೀಪ ನಡೆದ ಭೀಕರ ರಸ್ತೆ ಅಪಘಾತದಲ್ಲಿ ಓರ್ವ ವ್ಯಕ್ತಿ ಸ್ಥಳದಲ್ಲೇ ಮೃತಪಟ್ಟಿದ್ದು, ಮಹಿಳೆಯೊಬ್ಬರು ಗಂಭೀರವಾಗಿ ಗಾಯಗೊಂಡಿರುವ ಘಟನೆ ನಡೆದಿದೆ.

ಲಭ್ಯವಾದ ಮಾಹಿತಿಯ ಪ್ರಕಾರ, ಸೂರ್ಯ ಲಾಡ್ಜ್ ಸಮೀಪ ಟಿಪ್ಪರ್ ಹಾಗೂ ದ್ವಿಚಕ್ರ ವಾಹನದ ನಡುವೆ ಸಂಭವಿಸಿದ ಭೀಕರ ಡಿಕ್ಕಿಯಿಂದ ಈ ದುರ್ಘಟನೆ ನಡೆದಿದೆ. ದ್ವಿಚಕ್ರ ವಾಹನವು ಟಿಪ್ಪರ್‌ಗೆ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಅಪಘಾತದಲ್ಲಿ ಧುಮುಕನಾಳ ಗ್ರಾಮದ ನಿವಾಸಿಯಾದ 55 ವರ್ಷದ ದಿಲೀಪ್ ಪಾಟೀಲ ಅವರು ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಅವರೊಂದಿಗೆ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಪತ್ನಿ 50 ವರ್ಷದ ಲಲಿತಾಬಾಯಿ ಪಾಟೀಲ ಅವರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ತಕ್ಷಣ ಚಿಕಿತ್ಸೆಗಾಗಿ ವಿಜಯಪುರದ ಜಿಲ್ಲಾಸ್ಪತ್ರೆಗೆ ದಾಖಲಿಸಲಾಗಿದೆ.

ಘಟನೆಯ ಮಾಹಿತಿ ತಿಳಿಯುತ್ತಿದ್ದಂತೆಯೇ ಚಡಚಣ ಪೊಲೀಸ್ ಠಾಣೆಯ ಪಿಎಸ್‌ಐ ಸೋಮೇಶ ಗೆಜ್ಜಿ ಅವರು ತಮ್ಮ ಸಿಬ್ಬಂದಿಯೊಂದಿಗೆ ಸ್ಥಳಕ್ಕೆ ಭೇಟಿ ನೀಡಿ, ಮಹಜರು ನಡೆಸಿ ಪರಿಶೀಲನೆ ಆರಂಭಿಸಿದ್ದಾರೆ.

ಈ ಸಂಬಂಧ ಚಡಚಣ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಅಪಘಾತಕ್ಕೆ ನಿಖರ ಕಾರಣವೇನು ಎಂಬ ಕುರಿತು ಪೊಲೀಸರು ತನಿಖೆ ಕೈಗೊಂಡಿದ್ದಾರೆ. ಅಪಘಾತದಲ್ಲಿ ಭಾಗಿಯಾಗಿದ್ದ ಟಿಪ್ಪರ್ ವಾಹನದ ನೋಂದಣಿ ಸಂಖ್ಯೆ MH-09-CA-0822 ಎಂದು ತಿಳಿದುಬಂದಿದೆ.

ಪ್ರಸ್ತುತ ಪೊಲೀಸರು ಪ್ರಕರಣದ ಎಲ್ಲ ಆಯಾಮಗಳಲ್ಲಿ ತನಿಖೆ ನಡೆಸುತ್ತಿದ್ದು, ಮುಂದಿನ ಕಾನೂನು ಕ್ರಮ ಜಾರಿಯಲ್ಲಿದೆ.

# ಮಳೆ ಅಭಾವ: ಪರಿಸ್ಥಿತಿ ಎದುರಿಸಲು ಸಜ್ಜಾಗಿ

### ವಿಜಯಪುರ ಜಿಲ್ಲೆಯ ಅಭಿವೃದ್ಧಿ ಕಾಮಗಾರಿ ಪ್ರಗತಿ ಪರಿಶೀಲಿಸಿದ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಖುಷ್ಬು ಗೋಯಲ್ ಚೌಧರಿ ಅಧಿಕಾರಿಗಳಿಗೆ ಸೂಚನೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿನ ಕುಡಿಯುವ ನೀರಿನ ಲಭ್ಯತೆ, ಹಿಂಗಾರು ಹಾಗೂ ಮುಂಗಾರು ಮಳೆ ಪರಿಸ್ಥಿತಿ, ಮಳೆ ಕೊರತೆಯಾದಲ್ಲಿ ಪರ್ಯಾಯ ಮಾರ್ಗಗಳನ್ನು ಕೈಗೊಳ್ಳುವಂತೆ ಕೈಗಾರಿಕಾ ಮತ್ತು ವಾಣಿಜ್ಯ ಇಲಾಖೆಯ ಕೈಗಾರಿಕಾ ಅಭಿವೃದ್ಧಿ ಆಯುಕ್ತರು ಹಾಗೂ ನಿರ್ದೇಶಕರೂ ಆಗಿರುವ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ಶ್ರೀಮತಿ ಖುಷ್ಬು ಗೋಯಲ್ ಚೌಧರಿ ಅವರು ಹೇಳಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ ಇವರ ಸಹಯೋಗದಲ್ಲಿ ಶುಕ್ರವಾರ ನಗರದ ಜಿಲ್ಲಾ ಪಂಚಾಯತಿಯ ಸಭಾಂಗಣದಲ್ಲಿ ಆಯೋಜಿಸಿದ್ದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ಮುಂಗಾರು ಮಳೆ ಸಮರ್ಪಕವಾಗಿ ಆಗದೇ ಇದ್ದರೆ, ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಅಧಿಕಾರಿಗಳು ನೋಡಿಕೊಳ್ಳಬೇಕು ಎಂದರು.

ಇದಕ್ಕೆ ಯಾವ ರೀತಿಯ ಮುನ್ನೆಚ್ಚರಿಕಾ ಯೋಜನೆಗಳನ್ನು ರೂಪಿಸಲಾಗಿದೆ ಎಂಬುದರ ಕುರಿತು ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದರು.

ಕುಡಿಯುವ ನೀರಿನ ಪೂರೈಕೆಯಲ್ಲಿ ಯಾವುದೇ ರೀತಿಯ ವ್ಯತ್ಯಯ ಕೈಗೊಳ್ಳಬೇಕು. ನೀರಿನ ಮೂಲಗಳ ಉಂಟಾಗದಂತೆ ಅಗತ್ಯ ಸಿದ್ಧತೆಗಳನ್ನು ಸಂರಕ್ಷಣೆ, ಪರ್ಯಾಯ ನೀರು ಸರಬರಾಜು ವ್ಯವಸ್ಥೆ ಹಾಗೂ ತುರ್ತು ಸಂದರ್ಭಗಳಲ್ಲಿ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಸಂಬಂಧಪಟ್ಟ ಇಲಾಖೆಗಳು ಪೂರ್ವಸಿದ್ಧತೆ ಮಾಡಿಕೊಂಡಿರಬೇಕು ಎಂದು ಸೂಚಿಸಿದರು.

ವಿದ್ಯುತ್ ಪೂರೈಕೆ ಸಮರ್ಪಕವಾಗಿ ಆಗುತ್ತಿದೆಯೇ ಹಾಗೂ ಜಿಲ್ಲೆಯ ಗ್ರಾಮೀಣ ಪ್ರದೇಶಗಳ ಹಳ್ಳಿಗಳಿಗೆ ವಿದ್ಯುತ್ ಸರಬರಾಜು ವ್ಯವಸ್ಥೆ ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿದೆಯೇ, ವಿದ್ಯುತ್ ವ್ಯತ್ಯಯಗಳು ಉಂಟಾಗುತ್ತಿವೆಯೇ ಹಾಗೂ ವಿದ್ಯುತ್ ಸಂಪರ್ಕದಿಂದ ವಂಚಿತವಾಗಿರುವ ಯಾವುದೇ ಗ್ರಾಮ ಅಥವಾ ವಸತಿ ಪ್ರದೇಶಗಳಿವೆಯೇ ಎಂಬುದರ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ನಿಂಬರಗಿ, ಪ್ರೊಬೇಷನರಿ ಐಎಎಸ್ ಅಧಿಕಾರಿ ಅಭಿಷೇಕ ಸೆಹರಾ, ಅಪರ ಜಿಲ್ಲಾಧಿಕಾರಿ ಡಾ. ಔದ್ರಾಮ್, ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.



### ಎಲ್ಲ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಣೆ : ಸಿಇಓ



ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರಿಷಿ ಆನಂದ ಅವರು ಮಾತನಾಡಿ, ಜಿಲ್ಲೆಯ ವಿವಿಧ ಇಲಾಖೆಗಳ ಅಭಿವೃದ್ಧಿ ಕಾಮಗಾರಿಗಳ ಪ್ರಗತಿ, ಗ್ರಾಮೀಣಾಭಿವೃದ್ಧಿ ಯೋಜನೆಗಳು ಹಾಗೂ ವಿವಿಧ ಕಲ್ಯಾಣ ಕಾರ್ಯಕ್ರಮಗಳ ಅನುಷ್ಠಾನದ ಕುರಿತು ಸಭೆಗೆ ಮಾಹಿತಿ ನೀಡಿದರು. ಸರ್ಕಾರದ ಯೋಜನೆಗಳು ಪರಿಣಾಮಕಾರಿಯಾಗಿ ಜನರಿಗೆ ತಲುಪುವಂತೆ ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸುತ್ತಿವೆ ಎಂದು ತಿಳಿಸಿದರು.

### ಎಸ್‌ಐಆರ್ ಕಾರ್ಯ ಸುಸೂತ್ರವಾಗಿ ನಡೆಯುತ್ತಿದೆ : ಡಿಸಿ



ಜಿಲ್ಲಾಧಿಕಾರಿ ಡಾ. ಆನಂದ್ ಕೆ. ಅವರು ಮಾತನಾಡಿ, ಜಿಲ್ಲೆಯಲ್ಲಿ ಮುಂಗಾರು ಮಳೆ ಪರಿಸ್ಥಿತಿ, ಮಳೆ ಹಿನ್ನೆಲೆಯಲ್ಲಿ ಜಿಲ್ಲಾಡಳಿತ ಕೈಗೊಂಡಿರುವ ಮುನ್ನೆಚ್ಚರಿಕೆ ಕ್ರಮಗಳು ಹಾಗೂ ವಿಪತ್ತು ನಿರ್ವಹಣೆಗೆ ಕೈಗೊಂಡಿರುವ ಸಿದ್ಧತೆಗಳ ಕುರಿತು ಸಭೆಗೆ ಮಾಹಿತಿ ನೀಡಿದರು.

ಇದೇ ವೇಳೆ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಕಾರ್ಯ ಜಿಲ್ಲೆಯಾದ್ಯಂತ ಸುಸೂತ್ರವಾಗಿ ನಡೆಯುತ್ತಿದ್ದು, ಬೂತ್ ಮಟ್ಟದ ಅಧಿಕಾರಿಗಳ ಮೂಲಕ ಮನೆ ಮನೆಗೆ ತೆರಳಿ ಗಣತಿ ನಮೂನೆಗಳ ವಿತರಣೆ ಹಾಗೂ ಸಂಗ್ರಹ ಕಾರ್ಯ ಪ್ರಗತಿಯಲ್ಲಿದೆ ಎಂದು ವಿವರಿಸಿದರು.

## ನದಿಯಲ್ಲಿ ಬಿದ್ದ ಟಿಪ್ಪರ್ ಕ್ರೇನ್ ಮೂಲಕ ಮೇಲಕ್ಕೆ :ಚಾಲಕನ ಶವ ಪತ್ತೆ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಕೃಷ್ಣಾ ನದಿಯ ಕೊರ್ತಿ-ಕೊಲ್ಹಾರ ಸೇತುವೆ ಮೇಲಿಂದ ಬುಧವಾರ ಬಿದ್ದಿದ್ದ ಟಿಪ್ಪರ್ ವಾಹನವನ್ನು ಶುಕ್ರವಾರ ಮಧ್ಯಾಹ್ನ ಬ್ರಹತ್ ಕ್ರೇನ್ ಸಹಾಯದಿಂದ ಮೇಲಕ್ಕೆ ತೆಗೆದರು.

ಕೊಲ್ಹಾರ ಹಾಗೂ ಬೀಳಗಿ ಪೊಲೀಸ್ ಠಾಣೆಗಳ ಅಧಿಕಾರಿಗಳು, ಸಿಬ್ಬಂದಿ ಹಾಗೂ ಅಗ್ನಿಶಾಮಕ ದಳದ ಸಹಕಾರದಲ್ಲಿ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರವು ಸೋಲಾಪೂರದಿಂದ ತರಿಸಿದ ಭಾರೀ ಕ್ರೇನ್ ಮೂಲಕ ಕಾರ್ಯಾಚರಣೆ ನಡೆಸಲಾಯಿತು.

ಕ್ರೇನ್ ಚಾಲಕರ ಚಾಣಾಕ್ಷತನದಿಂದ ನದಿಯಲ್ಲಿ ಮುಳುಗಿದ್ದ ಟಿಪ್ಪರ್ ಅನ್ನು ಯಶಸ್ವಿಯಾಗಿ ಮೇಲಕ್ಕೆ ಎತ್ತಲಾಯಿತು. ಟಿಪ್ಪರ್ ವಾಹನ ಸಂಪೂರ್ಣವಾಗಿ ತುಂಡು-ತುಂಡಾಗಿರುವುದು ಕಂಡುಬಂದಿದೆ.

ದುರಂತದಲ್ಲಿ ಮೃತಪಟ್ಟ ಚಾಲಕ ಸಂತೋಷ ಕೋಟಿ ಅವರ ಶವವನ್ನು ಕೂಡ ಹೊರತೆಗೆದಿದ್ದು, ದೇಹ ಸಂಪೂರ್ಣ ಚಪ್ಪಟೆಯಾಗಿರುವುದಾಗಿ ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ.

### ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಪದಾಧಿಕಾರಿಗಳು & ಕಾರ್ಯಕಾರಿಣಿ ಸದಸ್ಯರಿಂದ ಮನವಿ

# ಪತ್ರಿಕಾ ಭವನ ನವೀಕರಣಕ್ಕಾಗಿ ಸಚಿವ ಎಂ.ಬಿ.ಪಾಟೀಲರಿಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದಿಂದ ಪತ್ರಿಕಾ ಭವನ ನವೀಕರಣ ಕಾರ್ಯಕ್ಕೆ ಆರ್ಥಿಕ ಸಹಾಯ ಅಥವಾ ನವೀಕರಣ ಮಾಡಬೇಕೆಂದು ಒತ್ತಾಯಿಸಿ ಉಸ್ತುವಾರಿ ಸಚಿವ ಎಂ ಬಿ ಪಾಟೀಲರಿಗೆ ಗೃಹ ಕಚೇರಿಯಲ್ಲಿ ಮನವಿ ಸಲ್ಲಿಸಲಾಯಿತು.

ನಗರದ ಸೊಲ್ಲಾಪುರ ರಸ್ತೆಯಲ್ಲಿರೋ ಸಚಿವ ಎಂ ಬಿ ಪಾಟೀಲ್ ಅವರ ನಿವಾಸಕ್ಕೆ ಭೇಟಿ ನೀಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಪದಾಧಿಕಾರಿಗಳು ಕಾರ್ಯಕಾರಿಣಿ ಸದಸ್ಯರು ಭೇಟಿಯಾಗಿ ಮನವಿ ಸಲ್ಲಿಸಿದರು.

ಸಚಿವರಿಗೆ ಮನವಿ ನೀಡಿ ಮಾತನಾಡಿದ ಕಾರ್ಯನಿರತ ಪತ್ರಕರ್ತರ ಸಂಘ ವಿಜಯಪುರ ಜಿಲ್ಲಾ ಅಧ್ಯಕ್ಷ ಅಶೋಕ ಯಡಳ್ಳಿ, ಶತಮಾನದ ಹೊಸ್ತಿಲಲ್ಲಿರುವ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ವಿಜಯಪುರ ಜಿಲ್ಲಾ ಘಟಕದ ಕಚೇರಿ ಪತ್ರಿಕಾ ಭವನವು ಮೂಲ ಸೌಲಭ್ಯಗಳ ಕೊರತೆಯಿಂದ ನರಳುತ್ತಿದ್ದು, ಅದಕ್ಕೆ ತುರ್ತಾಗಿ ಕಾಯಕಲ್ಪ ಒದಗಿಸಲು ಮುಂದಾಗಬೇಕಿದೆ. ವಿಜಯಪುರ ಜಿಲ್ಲಾ ಪಂಚಾಯತ ರಸ್ತೆಯಲ್ಲಿರುವ, ಜಿಲ್ಲೆಯ ಪತ್ರಕರ್ತರ ಶಕ್ತಿಕೇಂದ್ರವಾಗಿರುವ ಈ ಪತ್ರಿಕಾ ಭವನಕ್ಕೆ ಪತ್ರಿಕಾ ಭವನ ಕಟ್ಟಡವನ್ನು ನೆಲದಲ್ಲಿ ಮೂರು ಅಡಿ ಎತ್ತರಿಸುವ ಅನಿವಾರ್ಯತೆ ಇದೆ. ಭವನದ ಕಿಟಕಿ ಮತ್ತು ಬಾಗಿಲುಗಳು ಶಿಥಿಲಗೊಂಡಿದ್ದು ಅವುಗಳ ದುರಸ್ಥಿ ಆಗಬೇಕಿದೆ. ಪತ್ರಿಕಾ ಭವನದ ಇಡೀ ಕಟ್ಟಡದಲ್ಲಿ ಕೆಲ ರಿನೋವೇಷನ್ ಮಾಡಿಸಬೇಕಿದೆ. ಕುಡಿಯುವ ನೀರು, ಭವನದ ಆವರಣದಲ್ಲಿರೋ ಸಸಿ ಮರಗಳಿಗೆ ಹಾಗೂ ಉದ್ಯಾನವಕ್ಕಾಗಿ ಕೊಳವೆ ಬಾವಿಯ ಅವಶ್ಯಕತೆಯಿದೆ. ಪಾಳು ಬಿದ್ದಿರುವ ಶೌಚಾಲಯದ ದುರಸ್ತಿಯಾಗಬೇಕಿದೆ.

ಭವನದಲ್ಲಿ ಪತ್ರಿಕಾಗೋಷ್ಠಿ ನಡೆಸಲು ಬೇಕಾದ ಪೀಠೋಪಕರಣಗಳು ಸೇರಿದಂತೆ, ತಾಂತ್ರಿಕ ಸೌಲಭ್ಯ ಕಲ್ಪಿಸಿ, ಒಳ ಆವರಣಕ್ಕೆ ಆಧುನಿಕ ಸ್ಪರ್ಶ ನೀಡಬೇಕಿದೆ. ಭವನದ ಕಂಪೌಂಡ್ ಗೋಡೆಯನ್ನು ಎತ್ತರಿಸಿ ಕಬ್ಬಿಣದ ಗೇಟ್ ಅಳವಡಿಕೆ ಹಾಗೂ ಮಹಾದ್ವಾರ ನಿರ್ಮಾಣ ಮಾಡಬೇಕಿದೆ. ಭವನದ ಆವರಣದಲ್ಲಿ ವಿಶಾಲವಾದ ಸ್ಥಳ ಲಭ್ಯವಿದ್ದು, ಅಲ್ಲಿ ಪತ್ರಕರ್ತರ ಸಭೆ - ಸಮಾರಂಭಗಳಿಗಾಗಿ ಸಮುದಾಯ ಭವನದ ನಿರ್ಮಾಣ ಅಗತ್ಯವಿದೆ. ಭವನದ ಹೊರ ಆವರಣದಲ್ಲಿ ಉದ್ಯಾನವನ, ಪಾರ್ಕಿಂಗ್ ನಿರ್ಮಾಣ ಹಾಗೂ ವಿದ್ಯುತ್ ದೀಪಗಳು, ಸಿಸಿ ಕ್ಯಾಮರಾಗಳ ಸೌಲಭ್ಯ ಕಲ್ಪಿಸಬೇಕಿದೆ. ಆದ್ದರಿಂದ ತಾವು ಪತ್ರಿಕಾ ಭವನಕ್ಕೆ ಎಲ್ಲ ಸೌಲಭ್ಯಗಳನ್ನು ಕಲ್ಪಿಸಲು ಅನುದಾನದ ಅವಶ್ಯಕತೆ ಇದೆ. ಸೂಕ್ತ ರೀತಿಯ ಅನುದಾನದಲ್ಲಿ ಆದಷ್ಟು ಹೆಚ್ಚಿನ ಆರ್ಥಿಕ ಸಹಾಯ ಒದಗಿಸಬೇಕೆಂದು ಸಚಿವ ಎಂ ಬಿ ಪಾಟೀಲರಿಗೆ ವಿನಂತಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಚಿವ ಎಂ.ಬಿ.ಪಾಟೀಲರು, ನಾನು ಯಾವಾಗಲೂ ಪತ್ರಕರ್ತರ ಸಂಘದ ಬೆಳವಣಿಗೆಗೆ ಸಹಕರಿಸುವೆ. ಸದಾ ಒತ್ತಾಡದಲ್ಲಿರುವ ಪತ್ರಕರ್ತರ ಏಳಿಗೆಗೆ ಸ್ಪಂದಿಸುವ ಕೆಲಸ ನಮ್ಮಿಂದ ಆಗಲಿದೆ. ಪತ್ರಿಕಾ ಭವನಕ್ಕೆ ಸೌಲಭ್ಯ ಕಲ್ಪಿಸಲು ತಮ್ಮಿಂದ ಹಾಗೂ ಸಂಸ್ಥೆಯಿಂದ ಆಗುವ ಸಹಾಯವನ್ನು ಮಾಡುವ ಭರವಸೆ ನೀಡಿದರು.

ಇದೇ ವೇಳೆ ಮಾತನಾಡಿದ ಪ್ರಧಾನ ಕಾರ್ಯದರ್ಶಿ ಇಂದುಶೇಖರ್ ಮಣೂರ, ಕಾರ್ಯನಿರತ ಪತ್ರಕರ್ತರ ಸಂಘಕ್ಕೆ ಸಚಿವ ಎಂ ಬಿ ಪಾಟೀಲರು ಯಾವಾಗಲು ಸಹಾಯ ಸಹಕಾರ ನೀಡುತ್ತಾ ಬಂದಿದ್ದಾರೆ. ಪತ್ರಕರ್ತರಿಗಾಗಿ ಬಿಎಲ್ಡಿಇ ಸಂಸ್ಥೆಯ ಬಿ ಎಂ ಪಾಟೀಲ್ ವೈದ್ಯಕೀಯ ಮಹಾವಿದ್ಯಾಲಯ ಹಾಗೂ ಆಸ್ಪತ್ರೆಯಿಂದ ಆರೋಗ್ಯ ಕಾರ್ಡ್ ನೀಡಿದ್ದಾರೆ. ಸಂಘದ ಚಟುವಟಿಕೆಗಳಿಗೆ ಬೆಂಬಲಿಸುತ್ತಾ ಬಂದಿದ್ದಾರೆ. ಸದ್ಯ ಪತ್ರಿಕಾ ಭವನದ ನವೀಕರಣಕ್ಕೆ ಸಿ ಎಸ್ ಆರ್ ಅನುದಾನವನ್ನು ಕಾನೂನು ವ್ಯಾಪ್ತಿಯಲ್ಲಿ ಒದಗಿಸೋ ಭರವಸೆ ನೀಡಿದ್ದಾರೆ ಎಂದರು.

ಈ ವೇಳೆ ರಾಷ್ಟ್ರೀಯ ಮಂಡಳಿ ಸದಸ್ಯ ಶರಣಬಸಪ್ಪ ಮಸಳಿ, ಉಪಾಧ್ಯಕ್ಷ ಶಶಿಕಾಂತ ಮೆಂಡೆಗಾರ, ಖಜಾಂಚಿ ರಾಹುಲ್ ಆಪ್ಟೆ, ಕಾರ್ಯಕಾರಿ ಸದಸ್ಯರಾದ ಮಹೇಶ ವಿ ಶೆಟಗಾರ, ಗುರುರಾಜ ಗದ್ದನಕೇರಿ, ಗೋಪಾಲ ಕಣಿಮನಿ ಮತ್ತು ಸುನೀಲ ಗೊಡೆನ್ನವರ, ಸುನೀಲ ಕಾಂಬಳೆ ಸೇರಿದಂತೆ ಸಂಘದ ಪದಾಧಿಕಾರಿಗಳು ಹಾಗೂ ಸದಸ್ಯರು ಹಾಜರಿದ್ದರು.

# ಹೆಣ್ಮಕ್ಕಳನ್ನು ಕಡ್ಡಾಯವಾಗಿ ಶಾಲೆಗೆ ಕಳುಹಿಸಿ: ಸಚಿವ ಎಂ.ಬಿ.ಪಾಟೀಲ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕೋಟ್ಯಾಳ ಗ್ರಾಮದಲ್ಲಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರತಿಷ್ಠಾನ ಮತ್ತು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ಸಂಸ್ಥೆಗಳ ಸಿ.ಎಸ್.ಆರ್ ಅನುದಾನದಡಿ 3.25 ಕೋಟಿ ರೂಪಾಯಿ ವೆಚ್ಚದಲ್ಲಿ, ಸುಸಜ್ಜಿತ ಶಾಲಾ ಕಟ್ಟಡ ನಿರ್ಮಾಣಗೊಂಡಿದ್ದು, ಕೋಟ್ಯಾಳ ಸುತ್ತಮುತ್ತಲಿನ ಗ್ರಾಮಗಳ ನೂರಾರು ಗ್ರಾಮೀಣ ಪ್ರದೇಶದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ಮತ್ತು ಆಧುನಿಕ ಕಲಿಕಾ ವಾತಾವರಣವನ್ನು ಒದಗಿಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಸಚಿವರಾದ ಎಂ.ಬಿ. ಪಾಟೀಲ ಅವರು ಹೇಳಿದರು.

ತಿಕೋಟಾ ತಾಲೂಕಿನ ಕೋಟ್ಯಾಳ ಗ್ರಾಮದಲ್ಲಿ ಬೆಂಗಳೂರಿನ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರತಿಷ್ಠಾನ ಮತ್ತು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ಸಂಸ್ಥೆಗಳ ಸಿ.ಎಸ್.ಆರ್ ಅನುದಾನದಡಿ ನಿರ್ಮಿಸಲಾದ ಸುಸಜ್ಜಿತ ನೂತನ ಸರ್ಕಾರಿ ಪ್ರೌಢ ಶಾಲಾ ಕಟ್ಟಡವನ್ನು ಶುಕ್ರವಾರ ವಿದ್ಯುಕ್ತವಾಗಿ ಲೋಕಾರ್ಪಣೆಗೊಳಿಸಿ ಅವರು ಮಾತನಾಡಿದರು.




ಜಗತ್ತಿನಲ್ಲಿ ದೊಡ್ಡದಾದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ತನ್ನ ಆದಾಯದ ಮರುಹೂಡಿಕೆ ಮಾಡಿದ ಏಕೈಕ ವಿಮಾನ ನಿಲ್ದಾಣವಾಗಿದೆ. ಆ ಲಾಭಾಂಶದಲ್ಲಿ ಸಮಾಜಮುಖಿ ಕಾರ್ಯ ನಿರ್ವಹಿಸುವುದರಲ್ಲಿ ಸದಾ ಮುಂದಿರುವ ಈ ಸಂಸ್ಥೆ, ಕೋಟ್ಯಾಳದಲ್ಲಿ ಗುಣಮಟ್ಟದ ಹಾಗೂ ಸುಂದರ ಶಾಲಾ ಕಟ್ಟಡ ನಿರ್ಮಿಸಿಕೊಟ್ಟಿದೆ. ಗ್ರಾಮೀಣ ಪ್ರತಿಭೆಗಳಿಗೆ ಈ ಶಾಲಾ ಕಟ್ಟಡ ಅನುಕೂಲವಾಗಲಿದ್ದು, ಅದರಲ್ಲೂ ವಿಶೇಷವಾಗಿ ಹೆಣ್ಣುಮಕ್ಕಳ ಶಿಕ್ಷಣಕ್ಕೂ ಹೆಚ್ಚು ಒತ್ತು ನೀಡಿದರೆ, ಗ್ರಾಮೀಣ ಬಾಲಕಿಯರಿಗೆ ಈ ಶಾಲೆ ಭವಿಷ್ಯದ ದಿನಗಳಲ್ಲಿ ವರದಾನವಾಗಲಿದೆ ಎಂದರು.

### ಕೋಟ್ಯಾಳದಲ್ಲಿ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಪ್ರತಿಷ್ಠಾನದ ಸಿಎಸ್ ಆರ್ ಅನುದಾನದಡಿ ಉನ್ನತೀಕರಿಸಿದ ಪ್ರೌಢ ಶಾಲಾ ಕಟ್ಟಡ ಲೋಕಾರ್ಪಣೆ ಕಾರ್ಯಕ್ರಮ

ಹಾಗಾಗಿ ಹೆಣ್ಣು ಮಕ್ಕಳನ್ನು ಪೋಷಕರು ಕಡ್ಡಾಯವಾಗಿ ಶಾಲೆಗೆ ಕಳುಹಿಸಿಕೊಡಬೇಕು. ಭವಿಷ್ಯದ ದಿನಗಳಲ್ಲಿ ಅವರು ಇಂಜಿನೀಯರ್ ಹಾಗೂ ವೈದ್ಯರು ಒಳಗೊಂಡಂತೆ ಉನ್ನತ ಹುದ್ದೆಗೇರಿ ಉಜ್ವಲ ಭಾರತ ನಿರ್ಮಾಣಕ್ಕೆ ಕೈಜೋಡಿಸಲಿ ಎಂದು ಸಚಿವರು ಆಶಿಸಿದರು.

ಈ ಸುಸಜ್ಜಿತ ಶಾಲಾ ಕಟ್ಟಡವನ್ನು ಒಟ್ಟು 3.25 ಕೋಟಿ ರೂಪಾಯಿ ವೆಚ್ಚದಲ್ಲಿ, 7,000 ಚದರ ಅಡಿ ವಿಸ್ತೀರ್ಣದಲ್ಲಿ ಅತ್ಯಾಧುನಿಕವಾಗಿ ಪ್ರಾಥಮಿಕ ಹಾಗೂ ಪ್ರೌಢಶಾಲಾ ಕಟ್ಟಡ ನಿರ್ಮಿಸಲಾಗಿದೆ. ಇದರೊಂದಿಗೆ 800 ಚದರ ಅಡಿಯ ಹಳೆಯ ಕಟ್ಟಡದ ಪುನರುಜ್ಜೀವನ ಕಾರ್ಯವನ್ನು ಸಹ ಯಶಸ್ವಿಯಾಗಿ ಪೂರ್ಣಗೊಳಿಸಲಾಗಿದೆ ಎಂದು ಸಚಿವರು ನುಡಿದರು.

ಬೆಂಗಳೂರು ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಲಿಮಿಟೆಡ್ ನ ವ್ಯವಸ್ಥಾಪಕ ನಿರ್ದೇಶಕ ಮತ್ತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ. ಹರಿ ಮರಾರ ಮಾತನಾಡಿ, ಈ ಸುಂದರ ಕಟ್ಟಡ ವಿದ್ಯಾರ್ಥಿಗಳ ಭವ್ಯ ಭವಿತವ್ಯ ಬೆಳಗುವ ಜ್ಞಾನ ದೇಗುಲವಾಗಿದೆ. ನೀರಾವರಿಯಿಂದ ಈ ಭಾಗದ ರೈತರ ಬಾಳು ಸಮೃದ್ಧಿಗೊಳಿಸಿದ ಡಾ.ಎಂಬಿ ಪಾಟೀಲ ಅವರು ಶೈಕ್ಷಣಿಕ ಉನ್ನತಿಗಾಗಿ ಶ್ರಮಿಸುತ್ತಿದ್ದಾರೆ. ಅವರ ಶ್ರಮದ ಫಲವಾಗಿ ಈ ಕಟ್ಟಡ ಮೈದಳೆದಿದೆ ಎಂದರು.

ಮುಖ್ಯ ಹಣಕಾಸು ಅಧಿಕಾರಿ ಭಾಸ್ಕರ ಆನಂದರಾವ್, ಭೂಮಿ ದಾನ ಮಾಡಿದ ಶ್ರೀಮತಿ ಕಮಲಾ ಮುರುಗೇಶ ನಿರಾಣಿ, ಕ್ಷೇತ್ರ ಶಿಕ್ಷಣಾಧಿಕಾರಿಗ ಬಸವರಾಜ ತಳವಾರ ಮಾತನಾಡಿದರು.

"ನೀರಾವರಿಯಿಂದ ಭೂಮಿ ಬೇಡಿಕೆ ಹೆಚ್ಚಾಗಿದೆ. ಇಂದು ಜಿಲ್ಲೆಯಲ್ಲಿ ಕುಡಿಯುವ ನೀರಿಗೆ ಯಾವುದೇ ಸಮಸ್ಯೆ ಇಲ್ಲ. ಇದಕ್ಕೆ ನೀರಾವರಿ ಯೋಜನೆ ಒಂದುಕಡೆಯಾದರೆ ಕೆರೆ ಹಾಗೂ ಹಳ್ಳ ತುಂಬುವುದು ಇನ್ನೊಂದೆಡೆ ನಡೆದಿದೆ. ಹಾಗಾಗಿ ಈ ಭಾಗದ ಜಮೀನಿನ ಬೇಡಿಕೆ ಹೆಚ್ಚಾಗುತ್ತಲೇ ಇದೆ. ಪ್ರತಿ ಕಿಮೀ ಚೆಕ್ ಡ್ಯಾಂ ನಿರ್ಮಾಣ ಮಾಡಿ ನೀರು ಹಿಂಗಿಸಿ ಅಂತರ್ಜಲ ಮಟ್ಟ ಹೆಚ್ಚಿಸುವ ಯೋಜನೆ ಪ್ರಗತಿಯಲ್ಲಿದೆ. ಶಿಕ್ಷಣ, ಬಾಂದಾರ ನಿರ್ಮಾಣ, ನೀರಾವರಿ, ವಿದ್ಯುತ್ ಸೇರಿದಂತೆ ವಿವಿಧ ಅಭಿವೃದ್ಧಿ ಕಾರ್ಯ ಮಾಡಲಾಗುತ್ತಿದೆ."

■ ಎಂ.ಬಿ.ಪಾಟೀಲ
ವಿಜಯಪುರ-ಬಾಗಲಕೋಟೆ ಉಸ್ತುವಾರಿ ಸಚಿವರು

ಕಾರ್ಯಕ್ರಮದಲ್ಲಿ ಶಾಲಾ ಕಟ್ಟಡಕ್ಕೆ ಭೂಮಿ ದಾನ ನೀಡಿರುವ ಆನಂದರಾವ್ ಕುಲಕರ್ಣಿ, ಅನೀಲಕುಮಾರ ಪಾಟೀಲ, ವಿ.ಎಸ್ ಪಾಟೀಲ ಸೇರಿದಂತೆ ಹಲವು ಗಣ್ಯರು ಗ್ರಾಮಸ್ಥರು ಹಾಗೂ ಸಾರ್ವಜನಿಕರು ಪಾಲ್ಗೊಂಡಿದ್ದರು.

# ಮಾಹಿತಿಗಳ ಜಾಲದಲ್ಲಿ ಮಕ್ಕಳು ಸಿಲುಕದಿರಲಿ



■ **ಉದಯರಶ್ಮಿ ದಿನಪತ್ರಿಕೆ**

**ನಾವು - ನಮ್ಮವರು**

**(ಮಕ್ಕಳ ಬೆಳವಣಿಗೆಯಲ್ಲಿ ಪಾಲಕರ ಪಾತ್ರ ಕುರಿತು ಲೇಖನ ಮಾಲಿಕೆ)**

ಇವತ್ತಿನ ಮಾಹಿತಿ ಯುಗದಲ್ಲಿ ನಮಗೆ ಬೇಕಾದ ಬೇಡವಾದ ಹತ್ತು ಹಲವು ವಿಷಯಗಳು ನಮಗೆ ಮಾಹಿತಿಯ ರೂಪದಲ್ಲಿ ಲಭ್ಯವಾಗುತ್ತದೆ. ಈ ಹಿಂದೆ ಯಾವುದೇ ಹೊಸ ವಿಷಯವನ್ನು ನಮಗೆ ಪಾಲಕರು ಕಲಿಸುತ್ತಿದ್ದರು, ಪುಸ್ತಕಗಳ ಮೂಲಕ ವಿಷಯದ ಅರಿವಾಗುತ್ತಿತ್ತು ನಿಜ ಆದರೆ ಪುಸ್ತಕಗಳ ಲಭ್ಯತೆಯು ಕೂಡ ಅಷ್ಟೇ ಕಠಿಣವಾಗಿದ್ದು ಪುಸ್ತಕಗಳ ಮೂಲಕ ಮಸ್ತಕದ ಜ್ಞಾನವನ್ನು ಹೆಚ್ಚಿಸಿಕೊಳ್ಳಬೇಕು ಎಂಬ ಅರಿವು ಬಹಳಷ್ಟು ಜನರಿಗೆ ಇರಲಿಲ್ಲ.

ಮೊಬೈಲ್ ನಲ್ಲಿಯೇ ಜಗತ್ತನ್ನು ಕಾಣುತ್ತಿರುವ ಪ್ರಸ್ತುತ ದಿನಮಾನಗಳಲ್ಲಿ ಮಕ್ಕಳನ್ನು ಹೇಗೆ ಬೆಳೆಸುವುದು ಎಂಬ ಕುರಿತು ಪಾಲಕರಿಗೆ ಅರಿವು ಮೂಡಿಸಬೇಕಾಗಿದ್ದು ಮಕ್ಕಳ ನಡವಳಿಕೆಯನ್ನು ಬದಲಾಯಿಸುವ ನಿಟ್ಟಿನಲ್ಲಿ ಪಾಲಕರ ನಡವಳಿಕೆ ಹೇಗಿರಬೇಕು ಎಂಬುದು ಒಂದು ಸವಾಲಿನ, ಗೋಜಲಿನ ಸಂಗತಿಯೇ ಆಗಿದೆ.

ಕೆಲ ದಶಕಗಳ ಹಿಂದೆ ಮಕ್ಕಳ ಮೇಲೆ ಪ್ರಭಾವ ಬೀರುವವರಲ್ಲಿ

ಮೊದಲು ಪಾಲಕರು ನಂತರ ಶಿಕ್ಷಕರು ಮೂರನೆಯದಾಗಿ ಸ್ನೇಹಿತರು ಮತ್ತು ಕೊನೆಯದಾಗಿ ಮಾಧ್ಯಮಗಳು ಪ್ರಮುಖ ಪಾತ್ರ ವಹಿಸುತ್ತಿದ್ದವು. ಮನೆಯಲ್ಲಿ ಪಾಲಕರು ಹೇಳಿದ ಮಾತೇ ಮೊದಲ ಮತ್ತು ಕೊನೆಯ ಮಾತಾಗಿರುತ್ತಿತ್ತು. ಪಾಲಕರು ಸೂಚಿಸಿದಂತೆಯೇ ಶಿಕ್ಷಕರು ಮಕ್ಕಳನ್ನು ಕಟ್ಟುನಿಟ್ಟಿನ ಶಿಸ್ತಿಗೊಳಪಡಿಸುತ್ತಿದ್ದರು. ಸ್ನೇಹಿತರ ಪ್ರಭಾವ ಅಷ್ಟೇನು ಇರುತ್ತಿರಲಿಲ್ಲ. ಅಂತಿಮವಾಗಿ ಮಾಧ್ಯಮಗಳು ಮಕ್ಕಳ ಮೇಲೆ ಪ್ರಭಾವ ಬೀರುತ್ತಿದ್ದವು. ಆದರೆ ಇಂದು ಪರಿಸ್ಥಿತಿ ಸಂಪೂರ್ಣ ತಿರುವು ಮುರುವಾಗಿದ್ದು ಮಕ್ಕಳ ಮೇಲೆ ನಿಚ್ಚಳ ಪ್ರಭಾವವನ್ನು ಮಾಧ್ಯಮಗಳು ಬೀರುತ್ತಿದ್ದು ನಂತರದ ಸ್ಥಾನವನ್ನು ಕ್ರಮವಾಗಿ ಸ್ನೇಹಿತರು ಶಿಕ್ಷಕರು ಮತ್ತು ಕೊನೆಯ ಸ್ಥಾನವನ್ನು ಪಾಲಕರು ಪಡೆದುಕೊಂಡಿದ್ದಾರೆ ಎಂಬುದು ವಿಪರ್ಯಾಸದ ಸಂಗತಿ.

ಅಂದಿನ ಕೂಡು ಕುಟುಂಬಗಳಲ್ಲಿ ಮಕ್ಕಳು ಮನೆಯ ಎಲ್ಲಾ ಕೆಲಸ ಕಾರ್ಯಗಳನ್ನು ಮಾಡುತ್ತಿದ್ದರು. ಕುಟುಂಬದ ಎಲ್ಲಾ ಆಗು ಹೋಗುಗಳಲ್ಲಿ ಮಕ್ಕಳ ಪಾತ್ರ ಅಧಿಕವಾಗಿತ್ತು. ತಂದೆಯಾದವನು ತನ್ನ ಮಕ್ಕಳನ್ನು ಕಟ್ಟುನಿಟ್ಟಾಗಿ ದಂಡಿಸಿದಾಗ ಆ ಮಗುವನ್ನು ಕೂಡು ಕುಟುಂಬದ ಬೇರೊಬ್ಬ ಸದಸ್ಯ ಕರೆದೊಯ್ದು ರಮಿಸಿ ಊಟ ಮಾಡಿಸಿ ನಿಧಾನವಾಗಿ ಆತನ ತಪ್ಪನ್ನು ಆತನಿಗೆ ಮನದಟ್ಟು ಮಾಡಿಸಿ,ಆತನ ತಂದೆ ಆತನ ಒಳಿತಿಗಾಗಿಯೇ ಗದರಿಸಿದ್ದು ಎಂದು ತಿಳಿ ಹೇಳುತ್ತಿದ್ದರು.

ಆದರೆ ಇದೀಗ ವಿಭಕ್ತ ಕುಟುಂಬದಲ್ಲಿ ತಂದೆ ತಾಯಿ ಮತ್ತು ಒಂದು ಇಲ್ಲವೇ ಎರಡು ಮಕ್ಕಳು ಇದ್ದು, ಮಗುವನ್ನು ಪಾಲಕರು ಗದರಿಸಿದಾಗ ಆ ಮಗುವನ್ನು ರಮಿಸಿ ಅದರ ಮನವೊಲಿಸಿ ತಪ್ಪು ತಿದ್ದುವವರ್ಯಾರು? ಮಗು ಯಾರನ್ನು ಅವಲಂಬಿಸಬೇಕು ಎಂಬುದೇ ಯಕ್ಷ ಪ್ರಶ್ನೆಯಾಗಿದೆ?





ಪಾಲಕರಿಂದ ಬೈಸಿಕೊಂಡ ಮಗು ತನ್ನ ಕೋಣೆಯಲ್ಲಿ ಹೋಗಿ ಕುಳಿತಾಗ ಆತ ತನ್ನ ಪಾಲಕರು ತನ್ನನ್ನು ನಿರ್ಲಕ್ಷಿಸುತ್ತಿದ್ದಾರೆ, ಕಾಳಜಿ ಮಾಡುವುದಿಲ್ಲ, ಅವರಿಗೆ ತನ್ನ ಮೇಲೆ ಪ್ರೀತಿ ಇಲ್ಲ ಎಂದೆಲ್ಲ ಭಾವಿಸಿ ಅದೇ ನಿಜ ಎಂಬಂತೆ ನಂಬುತ್ತಾನೆ.

ಮಗು ತನ್ನ ಮನದ ಭಾವನೆಗಳನ್ನು ಹಂಚಿಕೊಳ್ಳಲು ಯಾರಾದರೂ ಒಬ್ಬರು ಬೇಕಲ್ಲವೇ? ಯಾರೂ ಇಲ್ಲದೆ ಹೋದಾಗ ಮಗು ಮೊಬೈಲ್ನ ಮೊರೆ ಹೋಗುತ್ತದೆ. ಪಾಲಕರಿಗೆ ತನ್ನ ಅಸ್ತಿತ್ವದ ಗುರುತೇ ಇಲ್ಲ ಎಂದು ಭಾವಿಸುವ ಮಗುವಿನ ಅಸ್ತಿತ್ವವನ್ನು ಗುರುತಿಸುವ ಆಧುನಿಕ ತಂತ್ರಜ್ಞಾನದ ಪ್ರಭಾವಿ ಮಾಯಾ ಜಾಲವು ಮಗು ಬಯಸುವ ಎಲ್ಲವನ್ನೂ ತನ್ನಲ್ಲಿ ಅಡಗಿಸಿಕೊಂಡಿದ್ದು ಮಗುವಿನ ಎಲ್ಲ ಅವಶ್ಯಕತೆಗಳನ್ನು ಪೂರೈಸುವ ಮೂಲಕ ತನ್ನ ಕಪಿಮುಷ್ಠಿಯಲ್ಲಿ ಇಟ್ಟುಕೊಂಡಿದೆ.

ಇಂದಿನ ಆಧುನಿಕ ಯುಗದಲ್ಲಿ ಏನನ್ನಾದರೂ ಸಾಧಿಸುವ, ಕುಟುಂಬಕ್ಕೆ ಹೆಚ್ಚಿನ ಆರ್ಥಿಕ ಸೌಲಭ್ಯಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಕರು ವ್ಯಸ್ತರಾಗಿದ್ದು ಮಕ್ಕಳೆಡೆ ಗಮನ ಹರಿಸಲು ಅವರಿಗೂ ಸಾಧ್ಯವಾಗುತ್ತಿಲ್ಲ.

ಇತ್ತೀಚೆಗೆ ಅಟೆಂಶನ್ ಮ್ಯಾನೇಜರ್ ಎಂಬ ಹೊಸ ಹುದ್ದೆಯು ಸೃಷ್ಟಿಸಲ್ಪಟ್ಟಿದ್ದು, ಈ ನಿರ್ವಾಹಕನ ಕೆಲಸ ತನ್ನ ಗ್ರಾಹಕನ ಗಮನವನ್ನು ಅತ್ತಿತ್ತ ನೋಡದಂತೆ ಕೇವಲ ತನ್ನಲ್ಲಿ ಹಿಡಿದಿಟ್ಟುಕೊಳ್ಳುವುದು. ಈ ಹಿಂದೆ ಸಾಮಾಜಿಕ ಜಾಲತಾಣಗಳು ವಿವಿಧ ಫೋಟೋಗಳು, ವಿಡಿಯೋಗಳನ್ನು ಹೊಂದಿದ್ದು ಕ್ಲಿಕ್ ಮಾಡಿದೊಡನೆ ಆರಂಭವಾಗುತ್ತಿದ್ದ ಈ ವಿಡಿಯೋಗಳನ್ನು ಇದೀಗ ನಾವು ಅವುಗಳನ್ನು ವೀಕ್ಷಿಸಲು ನಮ್ಮ ಬೆರಳನ್ನು ಒತ್ತುವ ಮುನ್ನವೇ ಸ್ವಯಂಚಾಲಿತವಾಗಿ

ಪ್ರಸಾರವಾಗುತ್ತವೆ. ವ್ಯಕ್ತಿಯು ತನ್ನೆಲ್ಲ ಕೆಲಸ ಕಾರ್ಯಗಳನ್ನು ಹಿಂದಿಟ್ಟು ವಿವಿಧ ಸಾಮಾಜಿಕ ಜಾಲತಾಣಗಳಲ್ಲಿ ತನ್ನನ್ನು ತಾನು ತೊಡಗಿಸಿಕೊಳ್ಳಲು ಕಾರಣ ನಾವು ಅವುಗಳ ಆಕರ್ಷಣೆಯಲ್ಲಿ ಸಿಲುಕಿಕೊಂಡಿರುವುದು.

ಸಾಮಾಜಿಕ ಜಾಲತಾಣಗಳು ವೈಜ್ಞಾನಿಕವಾಗಿ ಸಂಪೂರ್ಣವಾಗಿ ಮಕ್ಕಳ ಗಮನವನ್ನು ತಮ್ಮಲ್ಲಿ ಕೇಂದ್ರೀಕರಿಸಿಕೊಂಡಿವೆ. ಇಡೀ ದಿನ ಶಾಲೆಯಲ್ಲಿ ಕಳೆಯುವ ಮಕ್ಕಳು ತಮ್ಮೆಲ್ಲ ಅನುಭವಗಳನ್ನು ಹಂಚಿಕೊಳ್ಳಲು ಅತ್ಯುತ್ಸಾಹದಿಂದ ಮನೆಗೆ

ಬಂದಾಗ ಪಾಲಕರು ಆ ಮಕ್ಕಳನ್ನು ಕುರಿತು ಕೈಕಾಲು ಮುಖ ತೊಳೆ, ತಿಂಡಿ ತಿಂದು ಹಾಲು ಕುಡಿ, ಶಾಲೆಯ ಹೋಂವರ್ಕ್ ಮಾಡು ಎಂದು ಕಟುವಾಗಿ ಹೇಳುತ್ತಾರೆ. ಇದು ಮಕ್ಕಳ ಉತ್ಸಾಹ ಜರ್ರನೇ ಜರಿದು ಹೋಗಲು ಕಾರಣವಾಗುತ್ತದೆ.

ಮನೆಗೆ ಬರುವ ಮಕ್ಕಳನ್ನು ತಾಯಿ ಡಬ್ಬದಲ್ಲಿದ್ದುದನ್ನೆಲ್ಲ ಖಾಲಿ ಮಾಡಿದ್ದೀಯಾ ಎಂದು ಮೊದಲ ಪ್ರಶ್ನೆಯನ್ನು, ಶಾಲೆಯಲ್ಲಿ ಹೋಮ ವರ್ಕ್ ಏನು ಕೊಟ್ಟಿದ್ದಾರೆ ಎಂದು ಕೇವಲ ಎರಡು ಪ್ರಶ್ನೆಗಳನ್ನು ಕೇಳುತ್ತಾಳೆ.

ಇದರ ಬದಲಾಗಿ ತಾಯಿ ಮಕ್ಕಳು ಮನೆಗೆ ಬಂದೊಡನೆ ಅವರನ್ನು ಪ್ರೀತಿಯಿಂದ ತಬ್ಬಿ ಮುದ್ದಿಸಿ ಆ ದಿನ ಮಕ್ಕಳು ಶಾಲೆಯಲ್ಲಿ ಯಾವ ಹೊಸ ವಿಷಯಗಳನ್ನು ಕಲಿತರು, ಅವರು ಹೇಗಿದ್ದಾರೆ ಎಂದು ಕೇಳಬೇಕು. ಮಕ್ಕಳಿಗೆ ಟಾಸ್ಕ್ ಓರಿಯೆಂಟೆಡ್ ಆಗಿ ಏನೇನು ಮಾಡಬೇಕು ಎಂದು ಆದೇಶಿಸುವ ಬದಲು, ಫನ್ ಓರಿಯೆಂಟೆಡ್ ಆಗಿ ಮಕ್ಕಳ ಅವಶ್ಯಕತೆಗಳನ್ನು ಅರಿತು ಅದಕ್ಕೆ ಪೂರಕವಾಗಿ ವರ್ತಿಸಬೇಕು.

ಇಂದಿನ ಪಾಲಕರಿಗೆ ಬೇಕಾಗಿರುವುದು ಪುಸ್ತಕಗಳು, ಪಾಠಗಳು ಪರೀಕ್ಷೆಗಳು ಮತ್ತು ಫಲಿತಾಂಶ ಪಟ್ಟಿಗಳು. ಮಗುವಿನ ವ್ಯಕ್ತಿತ್ವ ನಿರ್ಮಾಣಕ್ಕಾಗಿ ಪಾಲಕರು ಏನನ್ನೂ ಮಾಡುತ್ತಿಲ್ಲ? ಎಂಬುದು ವಿಷಾದದ ಸಂಗತಿ. ಮಕ್ಕಳ ಕ್ರಿಯಾಶೀಲತೆಯನ್ನು ಬಡಿದೆಬ್ಬಿಸುವ ಶಿಕ್ಷಕರು ಕಡಿಮೆಯಾಗಿದ್ದು ಆ ಜಾಗದಲ್ಲಿ ಶಿಕ್ಷಕ ವೃತ್ತಿಯನ್ನು ನೌಕರಿ ಎಂದು ಭಾವಿಸುವ ಕೆಲಸಗಾರರು ಭರ್ತಿಯಾಗಿದ್ದಾರೆ. ದಿನಕ್ಕೆ ಇಂತಿಷ್ಟು ಗಂಟೆ ಮಾತ್ರವೇ ಕೆಲಸ ಮಾಡುತ್ತೇನೆ ಎಂದು ಸಮಯದ ಮಿತಿಯನ್ನು ಹಾಕಿಕೊಳ್ಳುವ ಕೆಲಸಗಾರರಿಂದ ಇನ್ನೇನನ್ನು ನಿರೀಕ್ಷಿಸಲು ಸಾಧ್ಯ? ಈ ನಿಟ್ಟಿನಲ್ಲಿ ಪಾಲಕರು ಜಾಗರೂಕರಾಗಬೇಕಾದ ಅವಶ್ಯಕತೆ



ಇದೆ.

ಇಲ್ಲಿ ಮುಖ್ಯವಾಗಿ ಕಾರ್ಯನಿರ್ವಹಿಸಬೇಕಾಗಿರುವುದು ಪಾಲಕರೇ ಎಂಬುದರಲ್ಲಿ ಎಳ್ಳಷ್ಟೂ ಸಂಶಯವಿಲ್ಲ. ತಾಯಿಯ ಗರ್ಭದಿಂದ ಹೊರಬರುವಾಗ ಮಗುವಿನ ಮೆದುಳು ಸುಮಾರು ಶೇಕಡ 25ರಷ್ಟು ಬೆಳೆದಿರುತ್ತದೆ. ಒಂದು ವರ್ಷದ ಹೊತ್ತಿಗೆ ಮತ್ತೆ ಐದರಿಂದ ಹತ್ತು ಶೇಕಡ ಮೆದುಳು ಬೆಳವಣಿಗೆಯಾಗಿದ್ದು ಸುಮಾರು 10 ವರ್ಷದ ಹೊತ್ತಿಗೆ ಶೇಕಡ 90ಕ್ಕಿಂತ ಹೆಚ್ಚು ಮಗುವಿನ ಮೆದುಳು ಬೆಳವಣಿಗೆಯನ್ನು ಹೊಂದುತ್ತದೆ. 16 ವರ್ಷದ ಹೊತ್ತಿಗೆ ಶೇಕಡ 100 ರಷ್ಟು ಬೆಳವಣಿಗೆಯನ್ನು ಕಾಣುತ್ತದೆ. ಆದ್ದರಿಂದ ಪಾಲಕರು ಮೊದಲ ಹತ್ತು ವರ್ಷದವರೆಗೆ ತಮ್ಮ ಹೆಚ್ಚಿನ ಸಮಯವನ್ನು ಮಕ್ಕಳಿಗೆ ಮತ್ತು ಅವರ ಬೆಳವಣಿಗೆಗೆ ಮೀಸಲಿಡಬೇಕು. ಒಳ್ಳೆಯ ಕೌಟುಂಬಿಕ ವಾತಾವರಣವನ್ನು ನಿರ್ಮಿಸಬೇಕು.

ಬದುಕಿನ ಅತಿ ಮುಖ್ಯ ಘಟ್ಟಗಳಾದ ಮದುವೆ ಮತ್ತು ಮಕ್ಕಳ ಕುರಿತು ನಾವು ಯಾವುದೇ ರೀತಿಯ ಔಪಚಾರಿಕ ಶಿಕ್ಷಣವನ್ನು ಹೊಂದಿಲ್ಲದೇ ಇರುವುದೇ ನಮ್ಮ ಇಂದಿನ ಎಲ್ಲ ವೈವಾಹಿಕ ಮತ್ತು ಕೌಟುಂಬಿಕ ಸಮಸ್ಯೆಗಳಿಗೆ ಕಾರಣ ಎಂಬುದು ಸ್ಪಷ್ಟವಾಗಿದೆ.. ಇದರ ಜೊತೆಗೆ ಒಳ್ಳೆಯ ಶಿಕ್ಷಕರನ್ನು ನಿರ್ಮಾಣ ಮಾಡಬೇಕಾಗಿದೆ. ಪಾಲಕರು ಮತ್ತು ಶಿಕ್ಷಕರು ಸೇರಿ ಮಗುವನ್ನು ಒಳ್ಳೆಯ ನಾಗರಿಕರಾಗಿಸುವ ನಿಟ್ಟಿನಲ್ಲಿ ಬೆಳೆಸಬೇಕಾಗಿರುವುದು ಅವರಿಬ್ಬರ ಆದ್ಯ ಕರ್ತವ್ಯವಾಗಿದ್ದು ಮಾಹಿತಿಗಳ ಜಾಲದಲ್ಲಿ ಮಗು ಸಿಲುಕಿಕೊಳ್ಳದಂತೆ ಅವರನ್ನು ಬೆಳೆಸುವುದು ಪಾಲಕರ

ಮುಂದಿರುವ ಮಹತ್ತರ ಜವಾಬ್ದಾರಿಯಾಗಿದೆ.

ಇನ್ನೂ ಹೇಳಬೇಕೆಂದರೆ ಇದೊಂದು ರೀತಿಯ ಮನಸ್ಸಿನ ಆಟ. ಮಕ್ಕಳು ತಮ್ಮ ಮನದ ಮಾತುಗಳನ್ನು ಕೇಳಲಿ ಎಂದು ಪಾಲಕರ ಗಮನವನ್ನು ಬಯಸುತ್ತದೆ.. ಆಗಮನವನ್ನು ಪಾಲಕರು ನೀಡದೆ ಹೋದಾಗ ಮಗುವಿನ ಆಸಕ್ತಿ ಮೊಬೈಲ್ ನೆಡೆಗೆ ತಿರುಗುತ್ತದೆ.

ಈ ಹಿಂದೆ ಶಾಲೆಗಳಲ್ಲಿ ಇರುತ್ತಿದ್ದ ಆಟದ ಅವಧಿಗಳು ಈಗ ಕಾಣ ಬರುವುದಿಲ್ಲ. ಆಟವಾಡುವ ಮಕ್ಕಳು ಸೋಲುವುದನ್ನು, ಗೆಲ್ಲುವುದನ್ನು ಏಳುವುದನ್ನು ಬೀಳುವುದನ್ನು ಹೊಂದಾಣಿಕೆಯ ಮನೋಭಾವವನ್ನು ಕಲಿಯುತ್ತಾರೆ. ಈ ಪಾಠಗಳು ಬದುಕಿಗೆ ಬಹು ಮುಖ್ಯವಾಗಿದ್ದು ಮಕ್ಕಳಿಗೆ ಪಾಠದ ಜೊತೆಗೆ ಆಟದ ಪಾಠವು ಅಷ್ಟೇ ಮುಖ್ಯವಾಗಿದ್ದು ಪಾಲಕರು ಮಕ್ಕಳೊಂದಿಗೆ ಆಟವಾಡುವ ಮೂಲಕ ಅವರೊಂದಿಗೆ ಹೆಚ್ಚು ಸಮಯ ಕಳೆಯಬೇಕು.. ಇದು ಮಗುವಿನಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತರಲು ಅತ್ಯವಶ್ಯಕ.

ಮಕ್ಕಳಲ್ಲಿ ಗುರುತರ ಬದಲಾವಣೆಗಳನ್ನು ತರಲು ಪಾಲಕರು ಬದಲಾಗಬೇಕಾದ, ತಮ್ಮ ಜವಾಬ್ದಾರಿಗಳನ್ನು ಅರಿತು ಮಕ್ಕಳೊಂದಿಗೆ ಹೆಚ್ಚಿನ ಸಮಯ ಕಳೆಯುವುದರ ಮೂಲಕ

ಅವರಲ್ಲಿ ಮೌಲ್ಯಗಳನ್ನು ಬಿತ್ತಿ ಉತ್ತಮ ಸಮಾಜ ನಿರ್ಮಾಣಕ್ಕೆ ನಾಂದಿ ಹಾಡಬೇಕಾದ ಗುರುತರ ಜವಾಬ್ದಾರಿ ಪಾಲಕರಲ್ಲಿ ಮೂಡಬೇಕಾಗಿದೆ.

ಲೇಖಿನ
■ ವೀಣಾ ಹೇಮಂತ್ ಗೌಡ
ಪಾಟೀಲ್.
ಮುಂಡರಗಿ
ಗದಗ ಜಿಲ್ಲೆ



# ಸಿಯುಕೆಯ ಡಾ.ಶಿವಾನಂದ ಬಂಟನೂರರಿಗೆ ರಾಷ್ಟ್ರೀಯ ಫೆಲೋಶಿಪ್ ಗೌರವ

ಕಲಬುರಗಿ: ಕೇಂದ್ರಸರ್ಕಾರದ ಸಂಸ್ಕೃತಿ ಸಚಿವಾಲಯವು ಕಲೆ ಮತ್ತು ಸಂಸ್ಕೃತಿ ಕ್ಷೇತ್ರದಲ್ಲಿ ಪ್ರತಿಭಾವಂತ ಹಿರಿಯ ಕಲಾವಿದರಿಗೆ ನೀಡುವ ರಾಷ್ಟ್ರೀಯ ಫೇಲೋಶಿಪ್ ಪ್ರಶಸ್ತಿಗೆ 2025–26 ನೇ ಸಾಲಿನಲ್ಲಿ "ಶಿಲ್ಪಕಲೆ" ವಿಭಾಗದಿಂದ ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾಲಯದ ಸಂಗೀತ ಮತ್ತು ಲಲಿತ ಕಲೆಗಳ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಶಿವಾನಂದ ಬಂಟನೂರು ಅವರಿಗೆ ಪ್ರತಿಷ್ಠಿತ ರಾಷ್ಟ್ರೀಯ ಫೆಲೋಶಿಪ್ ಪ್ರಶಸ್ತಿಯನ್ನು ನೀಡಿ ಗೌರವಿಸಿದೆ.

ಕಲ್ಲು, ಕಟ್ಟಿಗೆ, ಲೋಹ ಹಾಗೂ ಇತರ ಜಡ ವಸ್ತುಗಳಿಗೆ ಜೀವ ತುಂಬುವ ಅಪರೂಪದ ಕಲಾ ಸಾಮರ್ಥ್ಯ ಹೊಂದಿರುವ ಡಾ.ಶಿವಾನಂದ ಬಂಟನೂರ ಅವರು, ತಮ್ಮ ಶಿಲ್ಪ ಕಲೆಗಳ ಮೂಲಕ ಸಮಾಜದ ವಾಸ್ತವತೆ, ಮಾನವೀಯ ಮೌಲ್ಯಗಳು, ಹಸಿವು, ನೋವು, ಅಸಮಾನತೆ, ಹೋರಾಟ ಮತ್ತು ಬದುಕಿನ ಅನೇಕ ಮುಖಗಳನ್ನು ಅತ್ಯಂತ ಪರಿಣಾಮಕಾರಿಯಾಗಿ ಅಭಿವ್ಯಕ್ತಿಸಿದ್ದಾರೆ. ಅವರ ಪ್ರತಿಯೊಂದು ಶಿಲ್ಪವೂ ಕೇವಲ ಕಲಾಕೃತಿಯಾಗಿರದೆ, ಸಮಾಜವನ್ನು ಚಿಂತನೆಗೆ ಹಚ್ಚುವ ದೃಶ್ಯಕಾವ್ಯವಾಗಿ ಗಮನ ಸೆಳೆಯುತ್ತದೆ.



ಕಲಾವಿದರಾಗಿ ಮಾತ್ರವಲ್ಲದೆ ಕಳೆದ ಮೂರು ದಶಕಗಳಿಂದ ಕಲಾ ಆಸಕ್ತ ವಿದ್ಯಾರ್ಥಿಗಳಿಗೆ ಮಾರ್ಗದರ್ಶಕರಾಗಿಯೂ, ತರಬೇತಿಯನ್ನು ನೀಡುತ್ತಾ ಹಾಗೂ ಇಂದಿನ ಅನೇಕ ಯುವ ಕಲಾವಿದರಿಗೆ ಇವರು ಪ್ರೇರಣೆಯಾಗಿದ್ದಾರೆ. ತಮ್ಮ ಕಲಾಸಾಧನೆಯ ಮೂಲಕ ವಿದ್ಯಾರ್ಥಿಗಳಲ್ಲಿ ಸೃಜನಶೀಲತೆ, ಸಾಮಾಜಿಕ ಜವಾಬ್ದಾರಿ ಹಾಗೂ ಕಲೆಯ ಮೇಲಿನ ಬದ್ಧತೆಯನ್ನು ಬೆಳೆಸುವಲ್ಲಿ ಮಹತ್ವದ ಪಾತ್ರವನ್ನು ವಹಿಸುತ್ತಿದ್ದಾರೆ. ಈ ಫೆಲೋಶಿಪ್ ಅಡಿಯಲ್ಲಿ ಡಾ. ಶಿವಾನಂದ ಬಂಟನೂರು ಅವರಿಗೆ ತಿಂಗಳಿಗೆ 25 ಸಾವಿರ ರೂಗಳಂತೆ ಎರಡು ವರ್ಷಗಳವರೆಗೆ ಆರ್ಥಿಕ ನೆರವು ಲಭಿಸಲಿದೆ. ಈ ಫೆಲೋಶಿನಲ್ಲಿ ರಾಜ್ಯದ ಶಿಲ್ಪಕಲೆಯ ಸೃಷ್ಟಿ, ಸಂರಕ್ಷಣೆ ಹಾಗೂ ಶಿಲ್ಪಕಲೆಗಳ ಕುರಿತಾದ ಆಳವಾದ ಅಧ್ಯಯನ ಮತ್ತು ಸಂಶೋಧನೆಗಳನ್ನು ಕೈಗೊಳ್ಳಲು ಮಹತ್ವದ ಸಹಕಾರಿಯಾಗಲಿದೆ. ಫೆಲೋಶಿನ ನಿಯಮಾನುಸಾರ ಪ್ರತಿ ಆರು ತಿಂಗಳಿಗೊಮ್ಮೆ ಶಿಲ್ಪಕಲೆ ಕುರಿತ ಸಂಶೋಧನಾ ಪ್ರಗತಿ ವರದಿಯನ್ನು ಕೇಂದ್ರ ಸಂಸ್ಕೃತಿ ಸಚಿವಾಲಯಕ್ಕೆ ಸಲ್ಲಿಸಲಾಗುವುದು ಎಂದು ಡಾ. ಶಿವಾನಂದ ಬಂಟನೂರು ತಿಳಿಸಿದ್ದಾರೆ.

ಡಾ. ಶಿವಾನಂದ ಬಂಟನೂರ ಅವರ ದೀರ್ಘಕಾಲದ ಕಲಾ ಸಾಧನೆ, ಸೃಜನಶೀಲತೆ ಹಾಗೂ ಭಾರತೀಯ ಶಿಲ್ಪಕಲೆಗೆ ನೀಡಿರುವ ಗಮನಾರ್ಹ ಕೊಡುಗೆಯನ್ನು ಪರಿಗಣಿಸಿ, ಕೇಂದ್ರ ಸರ್ಕಾರದ ಅಡಿಯಲ್ಲಿ ಕಾರ್ಯನಿರ್ವಹಿಸುವ ಕೇಂದ್ರ ಸಂಸ್ಕೃತಿ ಸಚಿವಾಲಯವು "ಶಿಲ್ಪಕಲೆ" ವಿಭಾಗದಲ್ಲಿ ರಾಷ್ಟ್ರೀಯ ಫೆಲೋಶಿಪ್ ನೀಡಿ ಗೌರವಿಸಿರುವುದನ್ನು ಕರ್ನಾಟಕ ಕೇಂದ್ರೀಯ ವಿ.ವಿ.ಯ ಕುಲಪತಿ ಪ್ರೊ ಬಟ್ಟು ಸತ್ಯನಾರಾಯಣ ಅವರು ಹೃದಯಪೂರ್ವಕ ಅಭಿನಂದನೆಯನ್ನು ಸಲ್ಲಿಸಿದ್ದಾರೆ. ಈ ಸಂದರ್ಭದಲ್ಲಿ ಅವರು ಶುಭಕೋರುತ್ತಾ, ಈ ಶಿಲ್ಪಕಲಾ ಕ್ಷೇತ್ರದಲ್ಲಿ ಡಾ.ಬಂಟನೂರು ಅವರು ಬಹುದೊಡ್ಡ ಸಾಧನೆ ಮಾಡಿದ್ದಾರೆ. ಯುವ ಸಮುದಾಯಕ್ಕೆ ಒಬ್ಬ ಆದರ್ಶ ವ್ಯಕ್ತಿಯಾಗಿದ್ದಾರೆ. ಅವರ ಸಾಧನೆ ನಿರಂತರವಾಗಿರಲಿ ಎಂದು ಹಾರೈಸಿ, ಈ ಸಾಧನೆಯು ನಮ್ಮ ವಿ.ವಿ.ಗೆ ಅತ್ಯಂತ ಹೆಮ್ಮೆಯ ಸಂಗತಿ ಎಂದು ಅವರು ಅಭಿಪ್ರಾಯ ಪಟ್ಟಿದ್ದಾರೆ.ಕುಲಸಚಿವ ಪ್ರೊ.ಆರ್. ಆರ್.ಬಿರಾದಾರ,ಮಾನವಿಕ ಮತ್ತು ಭಾಷಾ ನಿಕಾಯದ ಡೀನ್ ಪ್ರೊ.ವಿಕ್ರಮ ವಿಸಾಜಿ ಸೇರಿದಂತೆ ಸಂಗೀತ ಮತ್ತು ಲಲಿತ ಕಲೆಗಳ ವಿಭಾಗದ ಪ್ರಾಧ್ಯಾಪಕರು ವಿವಿಧ ವಿಭಾಗಗಳ ಡೀನರು, ಪ್ರಾಧ್ಯಾಪಕರು, ಸಂಶೋಧನಾ ವಿದ್ಯಾರ್ಥಿಗಳು, ಕಲಾ ವಿದ್ಯಾರ್ಥಿಗಳು ಡಾ.ಶಿವಾನಂದ ಬಂಟನೂರು ಅವರಿಗೆ ಅಭಿನಂದನೆ ಸಲ್ಲಿಸಿದ್ದಾರೆ.



ಕಲಬುರಗಿ: ನಗರದ ಸರ್ದಾರ ವಲ್ಲಭಭಾಯಿ ಪಟೇಲ್ ವೃತ್ತದಿಂದ ರಂಗಮಂದಿರದವರೆಗೆ ಇಂದು ಆಯೋಜಿಸಿದ್ದ ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಅವರು ಸಂಗ್ರಹಿಸಿದ ವಚನ ಸಾಹಿತ್ಯದ ಭವ್ಯ ಮೆರವಣಿಗೆಗೆ ಎಂಎಟಜಿಸಿ ಶಶೀಲ ಜಿ.ನಮೋಶಿ ಚಾಲನೆ ನೀಡಿದರು. ಶಿವರಾಜ ಅಂಡಗಿ, ವಿನೋದಕುಮಾರ ಜನವರಿ, ಚನ್ನಮಲ್ಲಪ್ಪ ಯಳಸಂಗಿ, ಸತೀಶ ಜಮಖಂಡಿ, ಶ್ರೀನಿವಾಸ ಬಲ್ಪುರ್, ಚಂದ್ರಶೇಖರ್ ಮ್ಯಾಳಗಿ, ರಾಜು ಕೋಷ್ಠಿ ಇದ್ದರು.

# ಡಾ. ಮೊಹಮ್ಮದ್ ಅಸ್ಗರ್ ಚುಲ್ಬುರಿಂದ ಎಐಆರ್ ಜಾಗೃತಿ

ಕಲಬುರಗಿ: ಕಲಬುರಗಿ ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಹಾಗೂ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ಜಿಲ್ಲಾ ಸಂಚಾಲಕ ಡಾ. ಮೊಹಮ್ಮದ್ ಅಸ್ಗರ್ ಚುಲ್ಬುಲ್ ಅವರು, ಭಾರತೀಯ ಚುನಾವಣಾ ಆಯೋಗವು ಹೊಸದಾಗಿ ಆರಂಭಿಸಿರುವ ವಿಶೇಷ ತೀವ್ರ ಪರಿಷ್ಕರಣೆ ಅಭಿಯಾನದ ಅಡಿಯಲ್ಲಿ ತಮ್ಮ ಮತದಾರರ ಪರಿಶೀಲನೆ ಪ್ರಕ್ರಿಯೆಗೆ ಅಧಿಕೃತವಾಗಿ ಚಾಲನೆ ನೀಡಿದರು.

ಪ್ರಸ್ತುತ ರಾಜ್ಯಾದ್ಯಂತ ನಡೆಯುತ್ತಿರುವ ಈ ಬೃಹತ್ ಪ್ರಜಾಪ್ರಭುತ್ವ ಪ್ರಕ್ರಿಯೆಯ ಮಹತ್ವವನ್ನು ಅವರು ಒತ್ತಿಹೇಳಿದರು. ಭಾರತೀಯ ಚುನಾವಣಾ ಆಯೋಗವು ಕರ್ನಾಟಕದಾದ್ಯಂತ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆಯನ್ನು ಅಧಿಕೃತವಾಗಿ ಪ್ರಾರಂಭಿಸಿದೆ. 59,000 ಕ್ಕೂ ಹೆಚ್ಚು ಬೂತ್ ಮಟ್ಟದ ಅಧಿಕಾರಿಗಳ ಪಡೆಯು, ರಾಜ್ಯದ 5.54 ಕೋಟಿ ನೋಂದಾಯಿತ ಮತದಾರರನ್ನು ತಲುಪುವ ಉದ್ದೇಶದೊಂದಿಗೆ ಒಂದು ತಿಂಗಳ ಅವಧಿಯ ಮನೆ–ಮನೆ ಪರಿಶೀಲನಾ ಅಭಿಯಾನವನ್ನು ಆರಂಭಿಸಿದೆ ಎಂದು ಅವರು ತಿಳಿಸಿದರು.

ಈ ಒಂದು ತಿಂಗಳ ತೀವ್ರ ಅಭಿಯಾನದ ಅವಧಿಯಲ್ಲಿ, ಬಿಎಒಗಳು ಪ್ರತಿಯೊಂದು ಮನೆಗೂ ಭೇಟಿ ನೀಡಿ, ಮೊದಲೇ ಭರ್ತಿ ಮಾಡಲಾದ ಭೌತಿಕ ಗಣತಿ ನಮೂನೆಗಳನ್ನು ವಿತರಿಸಲಿದ್ದಾರೆ ಮತ್ತು ಸಂಗ್ರಹಿಸಲಿದ್ದಾರೆ. ಅರ್ಹ ನಾಗರಿಕರನ್ನು ಸರಿಯಾಗಿ ಗುರುತಿಸುವುದು, ದೀರ್ಘಕಾಲದ ತಾಂತ್ರಿಕ ತಪ್ಪುಗಳನ್ನು ಸರಿಪಡಿಸುವುದು, ನಿಖರವಾದ ಕೌಟುಂಬಿಕ ಮ್ಯಾಪಿಂಗ್ ಮಾಡುವುದು ಮತ್ತು ನಕಲಿ ಅಥವಾ ಅನರ್ಹ ನಮೂದುಗಳನ್ನು ತೆಗೆದುಹಾಕುವ ಮೂಲಕ ರಾಜ್ಯದ ಮತದಾರರ ಡೇಟಾಬೇಸ್ ಅನ್ನು ಸುವ್ಯವಸ್ಥಿತಗೊಳಿಸುವುದು ಮತ್ತು ಶುದ್ಧೀಕರಿಸುವುದು ಈ ವಿಶೇಷ ತೀವ್ರ ಪರಿಷ್ಕರಣೆಯ ಮುಖ್ಯ ಉದ್ದೇಶವಾಗಿದೆ.



ಆಯಾ ಬಿಎಒಗಳಿಗೆ ಈ ನಮೂನೆಗಳನ್ನು ಭರ್ತಿ ಮಾಡಿ ಸಲ್ಲಿಸಲು ಜುಲೈ 29 ಅಂತಿಮ ದಿನಾಂಕವಾಗಿದೆ ಎಂದು ಡಾ. ಚುಲ್ಬುಲ್ ಹೇಳಿದರು.

ಸಾರ್ವಜನಿಕರಿಗೆ ಕರೆ ನೀಡಿದ ಅವರು ಈ ನಿರ್ಣಾಯಕ ತಿಂಗಳಿನಲ್ಲಿ ಕರ್ನಾಟಕದ ಎಲ್ಲಾ ನಾಗರಿಕರು ಅತ್ಯಂತ ಜಾಗರೂಕರಾಗಿ ಮತ್ತು ಸಕ್ರಿಯರಾಗಿರಬೇಕು ಎಂದು ವಿನಂತಿಸಿದರು.

ಮತದಾರರ ಪಟ್ಟಿಯಲ್ಲಿ ನಮ್ಮ ಸಾಂಸ್ಥಿಕ ವಿವರಗಳನ್ನು ದೋಷರಹಿತವಾಗಿ ನವೀಕರಿಸುವುದೇ ನಮ್ಮ ಮೂಲಭೂತ ಪ್ರಜಾಪ್ರಭುತ್ವದ ಹಕ್ಕನ್ನು ರಕ್ಷಿಸುತ್ತದೆ. ಪ್ರತಿಯೊಬ್ಬ ನಾಗರಿಕರು, ವಿಶೇಷವಾಗಿ ನಮ್ಮ ಯುವಕರು ಮತ್ತು ಸಮಾಜದ ವಂಚಿತ ವರ್ಗದವರು ಇದಕ್ಕೆ ಪ್ರಥಮ ಆದ್ಯತೆ ನೀಡಬೇಕು. ವಿಳಂಬ ಮಾಡಬೇಡಿನಿಗದಿತ ಗಡುವಿನೊಳಗೆ ನಿಮ್ಮ ಗಣತಿ ನಮೂನೆಯನ್ನು ಭರ್ತಿ ಮಾಡಿ ಹಿಂತಿರುಗಿಸಿ, ಮತ್ತು ನಿಮ್ಮ ಮನೆಗೆ ಭೇಟಿ ನೀಡುವ ಬಿಎಒ ಅವರಿಂದ ಅಧಿಕೃತ ಸ್ವೀಕೃತಿ ರಶೀದಿಯನ್ನು ಪಡೆಯುವುದನ್ನು ಖಚಿತಪಡಿಸಿಕೊಳ್ಳಿ ಎಂದು ಡಾ. ಚುಲ್ಬುಲ್ ತಿಳಿಸಿದರು.ಈ ಪ್ರಕ್ರಿಯೆಯನ್ನು ಸುಲಭಗೊಳಿಸಲು, ಚುನಾವಣಾ ಆಯೋಗವು ದ್ವಿಮುಖ ಸಲ್ಲಿಕೆ ವಿಧಾನವನ್ನು ಕಲ್ಪಿಸಿದೆ ಎಂದು ಡಾ. ಚುಲ್ಬುಲ್ ಸ್ಪಷ್ಟಪಡಿಸಿದರು. ಬಿಎಒಗಳು ಮನೆಗೆ ಭೇಟಿ ನೀಡಿದಾಗ ಅವರಿಗೆ ಭೌತಿಕ ನಮೂನೆಗಳನ್ನು ಸುಲಭವಾಗಿ ಹಸ್ತಾಂತರಿಸಬಹುದಾಗಿದ್ದು, ಮತದಾರರು ಅಧಿಕೃತ ರಾಷ್ಟ್ರೀಯ ಮತದಾರರ ಪೋರ್ಟಲ್ ಗೆ ಸುರಕ್ಷಿತವಾಗಿ ಲಾಗ್ ಇನ್ ಆಗುವ ಮೂಲಕ ಅಥವಾ ವಿಶೇಷ 'ಎಸಿನೆಟ್' ಮೊಬೈಲ್ ಅಪ್ಲಿಕೇಶನ್ ಬಳಸಿ ಡಿಜಿಟಲ್ ರೂಪದಲ್ಲಿಯೂ ತಮ್ಮ ವಿವರಗಳನ್ನು ಪರಿಶೀಲಿಸಬಹುದು, ನವೀಕರಿಸಬಹುದು ಮತ್ತು ಸಲ್ಲಿಕೆಯನ್ನು ಪೂರ್ಣಗೊಳಿಸಬಹುದಾಗಿದೆ.



# ಸಸಿ ನೆಟ್ಟು ವಿಶ್ವ ವೈದ್ಯರ ದಿನಾಚರಣೆ

ಕಲಬುರಗಿ: ನಗರದ ಜಿಮ್ಸ್ ಆಸ್ಪತ್ರೆ ಸುತ್ತಲ್ಲಿನ ಅವರಣದಲ್ಲಿ ವಿಶ್ವ ವೈದ್ಯರ ದಿನಾಚರಣೆಯ ಹಾಗೂ ವಯೋ ನಿವೃತ್ತಿ ಹೊಂದಿದ ನೆನಪಿನಗೋಸ್ಕರ ಜಿಮ್ಸ್ ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕರಾದ ಡಾ.ಶಿವಕುಮಾರ್ ಸಿ.ಆರ್. ಮತ್ತು ಯಾದಗಿರಿಯ ಯೀಮ್ಸ್ ನಿರ್ದೇಶಕರಾದ ಡಾ.ಸಂದೀಪ್ ಹರಾಸಣಗಿ ಅವರ ಸಮ್ಮುಖದಲ್ಲಿ ಸಸಿ ನೆಡುವ ಮೂಲಕ ಆಚರಿಸಲಾಯಿತು.

ಈ ಸಂದರ್ಭದಲ್ಲಿ ವೀರಣ್ಣ ಶಿವಪುರ, ರಾಚಣ್ಣ ಬಿಸ್ಗೊಂಡ, ಸುರೇಶ್, ಶಿವಾನಂದ, ರಾಮಲಿಂಗ, ಬಸವರಾಜ, ಶಂಕರಲಿಂಗ ಪಾಟೀಲ ,ಕಾವೇರಿ ಹಾಗೂ ಇತರರು ಹಾಜರಿದ್ದರು.

ಪ್ರತಿ ಸಂದರ್ಭದಲ್ಲೂ ಪರಿಸರ ಸಂರಕ್ಷಣೆಗಾಗಿ ಆಸ್ಪತ್ರೆಯ ಆವರಣದಲ್ಲಿ ಹಸಿರು ಬೆಳೆಸಲು, ಉಳಿಸಲು ಶ್ರಮವಹಿಸಲಾಗುತ್ತಿದೆ. ಆಸ್ಪತ್ರೆಯ ಆವರಣ "ಪ್ಯೂರ್ ಆಕ್ಸಿಜನ್ ಜೋನ್" ಮಾಡಲಾಗುತ್ತಿದೆ. ಆಸ್ಪತ್ರೆ ಆವರಣದಲ್ಲಿ ವಾಯು ವಿಹಾರಕ್ಕೆ ಸಾರ್ವಜನಿಕರು ಬರುತ್ತಿದ್ದು ಸಂತಸ ವ್ಯಕ್ತಪಡಿಸುತ್ತಿದ್ದಾರೆ.

# ಅಂಗೈಯಲ್ಲಿ ಅರಮನೆ

## ಭಾವರಶ್ಮಿ

■ **ಉದಯರಶ್ಮಿ ದಿನಪತ್ರಿಕೆ**

ಅಲ್ಲಲ್ಲಿ ತೇಪೆ ಹಾಕಿದ ಹರಿದ ಅಂಗಿ ಹಾಕಿದ್ದರೂ, ಕಳ್ಳಕಿಂಡಿಯ ಹಾಗೇ ಕಾಣ್ತಿರೋ ಮುರುಕಲು ಗುಡಿಸಲೊಳಗಿದ್ದರೂ, ತಲೆಗೆ ಎಣ್ಣೆ ಕಾಣದೇ ಸುಕ್ಕುಸುಕ್ಕಾದ ಕೂದಲು ಹೊಂದಿದ್ದರೂ, ಗುಡಿಸಲಿನ ಹೊರಗೆ ಎರಡು ಇಟ್ಟಂಗಿಗಳನ್ನಿಟ್ಟು ಅದರ ಮೇಲೆ ಅನ್ನ ಬೇಯಿಸಿಕೊಳ್ಳುತ್ತಿದ್ದರೂ, ಗಮ್ಮತ್ತಿಗೇನೂ ಕಡಿಮೆಯಿಲ್ಲ, ಅವರ ಮೊಗದಲ್ಲಿನ ನಗುವಿಗೆ ಬರವಿಲ್ಲ, ಆಡೋ ಕೀಟಲೆಗಳಿಗೆ ಕೊನೆಯಿಲ್ಲ ಎಂಬುದನ್ನು ನೋಡಿದಾಗ ಅನಿಸುತ್ತೆ ಹೊಟ್ಟೆತುಂಬ ಊಟಕ್ಕಿಲ್ಲದಿದ್ದರೂ ಅದೆಷ್ಟು ಖುಷಿಯಾಗಿ, ನೆಮ್ಮದಿಯಾಗಿ ಇದ್ದಾರಲ್ಲ ಎಂದು..!

ಸಂತೋಷಕ್ಕೆ ದೊಡ್ಡ ದೊಡ್ಡ ಮಹಲುಗಳು ಬೇಕಿಲ್ಲ, ಪ್ರೀತಿಸುವ ಜೀವ,





ಕಾಳಜಿ ಪಡುವ ಸಂಗಾತಿ, ಮನವನ್ನರಿತು ಮುದನೀಡುವ ಬೆಸುಗೆ ಬಾಂಧವ್ಯ ಇವಿದ್ದರೆ ಸಾಕು. "ಸ್ವರ್ಗಕ್ಕೆ ಮೂರೇ ಗೇಣು".

ಅರಮನೆ ಅಂದ ತಕ್ಷಣ ನೆನಪಾಗುವುದು, ದೊಡ್ಡ ದೊಡ್ಡ ಸುಂದರ ವಿನ್ಯಾಸದ ಗೋಡೆ, ಝಗಮಗಿಸುವ ಬೆಳಕಿನ ಮಿಂಚು, ಐಶಾರಾಮಿ ಜೀವನ. ಆದರೆ ಈ ಭವ್ಯತೆ ತಾಯಿ ತನ್ನ ಮಗುವಲ್ಲಿ ಕಾಣುವ ಮುಗ್ಧ ನಗುವಿಗೆ ಸಮಾನವಾ, ಮಗುವು ಅಮ್ಮನಲ್ಲಿ ಬಯಸುವ ಮಮತೆ, ಕಾಳಜಿ ಅವಳ ಲಾಲಿಹಾಡಿನ ಮೋಡಿಯಲ್ಲಿ ಕಳೆದು ಸುಖನಿದ್ರೆಯಲ್ಲಿ ಜಾರಿ ಸವಿ ಕನಸುಗಳಿಗೆ ಹೋಲಿಸಬಹುದಾ, ಸಹೋದರ ಸಹೋದರಿಯ ಪ್ರೀತಿ ವಿಶ್ವಾಸ, ಆಟ ತುಂಟಾಟ, ಚೇಷ್ಟೇ ಕೀಟಲೆಗಳಿಗೆ ಸಮವಾ, ಅಪ್ಪನ ಹುಸಿಮುನಿಸು, ಮಕ್ಕಳಿಗೆ ಕಲಿಸುವ ಜೀವನಪಾಠಕ್ಕೆ ಹೋಲಿಸಬಹುದಾ, ಸಂಗಾತಿಯ ಸಾಂಗತ್ಯ ವಿಶ್ವಾಸ, ಮಿತ್ರನ ಕೈಹಿಡಿತ ಹೀಗೆ ಪ್ರೀತಿಯಿಂದ, ತ್ಯಾಗದಿಂದ, ಕರುಣೆ, ಅನುಕಂಪದಿಂದ ರೂಪುಗೊಂಡು ಬೆಸೆದ ಗಟ್ಟಿಬಂಧವೇ ಅರಮನೆ. ಅದು ನಮ್ಮ ಅಂಗೈಲೇ ಕಾಣಬಹುದು.

ಇತ್ತೀಚೆಗೆ ಮನುಷ್ಯ ಮನುಷ್ಯನನ್ನು ಅಳೆಯುವ ತಿಳಿಯುವ ಮಾಪನ ಗುಣ, ನಡತೆ, ಸಂಸ್ಕಾರ, ಶಿಸ್ತು, ಕ್ರಮಬದ್ಧ ಜೀವನದಿಂದಲ್ಲ. ಬದಲಾಗಿ ಅವನ ಶ್ರೀಮಂತಿಕೆ, ಹಣ ಆಭರಣ, ಅವನೆಷ್ಟು ಆಸ್ತಿ ಮಾಡಿದ್ದಾನೆ ಎನ್ನುವ ಲೆಕ್ಕಾಚಾರದ ಕುರಿತಾಗಿದೆ. ಅವನು ನಿರ್ಮಿಸಿದ ಭವ್ಯ ಬಂಗಲೆ, ಅರಮನೆಯಲ್ಲಿ ಅದೆಷ್ಟು ನೋವು ಸಂಕಟಗಳು ರಹಸ್ಯಗಳು ಅಡಗಿವೆಯೋ.! ಸಮಾಧಿಯಾಗಿವೆಯೋ.!



ಅದೇ ರಸ್ತೆಬದಿಯಲ್ಲಿ ಫುಟ್–ಪಾತ್ ಮೇಲೆ ಮಲಗುವವನ ಮನಸ್ಸು ಅದೆಷ್ಟು ನೆಮ್ಮದಿಯಲ್ಲಿ ದುಗುಡ ಇರದೇ ಗಲಾಟೆ ಆರ್ಭಟವಿರುವ ಸಂತೆಯಲ್ಲಿ ಬೇಕಿದ್ರೂ ಸುಖ ನಿದ್ದೆ ಅವನದಾಗುವುದು.

ಅರಮನೆ ಅಂದರೆ ಬರೀ ವಿಶಾಲವಾದ ಕಟ್ಟಡ ಕಟ್ಟಿ ಬದುಕುವುದಲ್ಲ, ಬದಲಿಗೆ ನಮ್ಮ ಕೈಲಾದ ಸೇವೆ, ಮನಸ್ಸಿಗೆ ನೆಮ್ಮದಿ ತರುವಂತಹ ಕೆಲಸ ಮಾಡಿದಾಗ ಕಷ್ಟದಲ್ಲಿದ್ದವನ ಮುಖದಲ್ಲಿ ಕಾಣುವ ಮಂದಹಾಸವೇ ಮನಸ್ಸಿನ ಅರಮನೆ.

ಪ್ರೀತಿ ಬಾಂಧವ್ಯಗಳ ಬಾನಾಡಿಯಲ್ಲಿ ತೇಲುವ ಜೀವಗಳ ವಾಸವೇ ನಿಜವಾದ ಅರಮನೆ.

ಬಾಳಪಯಣದ ಸಿಹಿ ಕ್ಷಣಗಳೇ ನಿಜವಾದ ಸಂಪತ್ತಿನ ಅರಮನೆ. ಪ್ರೀತಿಯಿಂದ ಹಂಚಿದ ಬದುಕೇ, ನಿಜವಾದ ಸಾರ್ಥಕತೆಯ ಜೀವನವೇ ನೆಮ್ಮದಿಯ ಅರಮನೆ. ಪ್ರೀತಿ, ಕರುಣೆ, ನಗು ಹಂಚಿದ ಕ್ಷಣಗಳೇ ಬಾಳಿನ ಸಾರ್ಥಕತೆಯ ಪುಟಗಳು. ಇವೇ ಶಾಶ್ವತ ನೆಲೆಗಟ್ಟಿನ ಪ್ರೀತಿಯ ಅರಮನೆ. ಇವೆಲ್ಲ ಐಶ್ವರ್ಯದಿಂದಾಗಲಿ, ಸಂಪತ್ತಿನಿಂದಾಗಲಿ, ವೈಭೋಗದ ಜೀವನದಿಂದಾಗಲಿ ಬರುವಂತಹುದಲ್ಲ, ಬದಲಾಗಿ ನಮ್ಮ ವ್ಯಕ್ತಿತ್ವದಲ್ಲಿ, ನಮ್ಮ ಸಂಸ್ಕೃತಿಯಲ್ಲಿ, ನಮ್ಮ ದಿನನಿತ್ಯದ ಬದುಕಲ್ಲಿ ಅಳವಡಿಸಿಕೊಳ್ಳಬೇಕಾಗಿರುವ ಮಾಣಿಕ್ಯಗಳಂತಹ ಸಂಸ್ಕಾರದಿಂದ ಬರುವಂತಹದ್ದು. ನಮ್ಮ ಅಂಗೈಲಿ ಅರಮನೆ ಸೃಷ್ಟಿಸಿಕೊಳ್ಳಬಹುದಾದ ನಿರ್ಮಾತೃರು ನಾವೇ. ಇದಕ್ಕೆ ಕೂಲಿಕಾರರ, ಸಿಮೆಂಟಿನ, ಯಾವುದೇ ಕಾನೂನಿನ ಪರವಾನಿಗೆ ಬೇಕಿಲ್ಲ, ನಮ್ಮ ಸುಖಕ್ಕೆ ನಾವೇ ಮಾಲೀಕರು ನಾವೇ ಜವಾಬ್ದಾರರು.

ಅಂಗೈಲಿ ಅರಮನೆ ನಮ್ಮದಾಗಿಸಿಕೊಳ್ಳುವ ಆಸೆ ಪ್ರಯತ್ನ ಪ್ರತಿಯೊಬ್ಬ ನಾಗರಿಕನದ್ದಾಗಿರಲಿ. ಪ್ರತಿಯೊಬ್ಬನ ಅಭಿಲಾಸೆ ಇಡೇರಿಸಿಕೊಳ್ಳುವತ್ತ ಮನ ವಾಲಲಿ. ಬಾಹ್ಯ ವೈಭೋಗಕ್ಕಿಂತ ಮನಸ್ಸಿನ ನೆಮ್ಮದಿಯತ್ತ ಬದುಕು ಕಟ್ಟಿಕೊಂಡರೆ ಖಂಡಿತ ಎಲ್ಲರಲ್ಲೂ ಅವರವರ ಅಂಗೈಲೇ ಅರಮನೆ ಕಾಣಬಹುದು.

ಲೇಖನ
■ ಶೀತಲ್ ಹೆಗಡೆ
'ಕಥಾ ಅರಮನೆ'
ಬರಹಗಾರರು



# ಭಾರತೀಯ ಶ್ರೇಷ್ಟ ಪರಿಸರವಾದಿ ಸಾಲುಮರದ ತಿಮ್ಮಕ್ಕ

ಕಲಬುರಗಿ : ಸಾಲುಮರದ ತಿಮ್ಮಕ್ಕನವರು ನಮ್ಮ ಕನ್ನಡ ನೆಲದ ಅಪರೂಪದ, ಮಾದರಿಯ ಸಾಧಕಿಯಾಗಿದ್ದಾರೆ. ಅವರೊಬ್ಬ ಭಾರತೀಯ ಶ್ರೇಷ್ಟ ಪರಿಸರವಾದಿ. ತಮಗೆ ಮಕ್ಕಳಿಲ್ಲದ ಕಾರಣಕ್ಕೆ ರಸ್ತೆಯ ಬದಿಯಲ್ಲಿ ಆಲದ ಸಸಿಗಳನ್ನು ನೆಟ್ಟು ಅವುಗಳನ್ನೇ ತಮ್ಮ ಮಕ್ಕಳಂತೆ ಭಾವಿಸಿ ಬೆಳೆಸಿದವರು. ಅನಕ್ಷರಸ್ಥೆಯಾಗಿದ್ದರೂ ಪರಿಸರ ಸಂರಕ್ಷಣೆಯಲ್ಲಿ ಮಹತ್ತರ ಕಾರ್ಯ ಮಾಡಿದ್ದಾರೆ ಎಂದು ಉಪನ್ಯಾಸಕ ಎಚ್.ಬಿ.ಪಾಟೀಲ್ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಸಾಲು ಮರದ ತಿಮ್ಮಕ್ಕನವರ 115ನೇ ಜನ್ಮದಿನಾಚರಣೆ'ಯಲ್ಲಿ ಅವರು ಮಾತನಾಡುತ್ತಿದ್ದರು.

ತಿಮ್ಮಕ್ಕನವರಲ್ಲಿರುವ ಪರಿಸರದ ಕಾಳಜಿ ನಮ್ಮೆಲ್ಲರಿಗೆ ಮಾದರಿಯಾಗಿದೆ. ನಾವೆಲ್ಲರು ಗಿಡ–ಮರಗಳನ್ನು ಬೆಳೆಸಿ, ಪರಿಸರವನ್ನು ಕಾಪಾಡುವ ಮೂಲಕ ತಿಮ್ಮಕ್ಕನವರ ತತ್ವವನ್ನು ಆಚರಿಸೋಣ. ಈ ನಿಟ್ಟಿನಲ್ಲಿ ನಮ್ಮ ಬಸವೇಶ್ವರ ಸಮಾಜ ಸೇವಾ ಬಳಗವು ಕಳೆದ 9 ವರ್ಷಗಳಲ್ಲಿ 2000ಕ್ಕೂ ಅಧಿಕ ಸಸಿಗಳನ್ನು ನೆಡುವುದು ಮತ್ತು ವಿತರಣೆಯ ಕಾರ್ಯ ಮಾಡುವ ಮೂಲಕ ವೃಕ್ಷಮಾತೆ ತಿಮ್ಮಕ್ಕನವರ ತತ್ವವನ್ನು ಅಳವಡಿಸಿಕೊಂಡಿದೆ. ಮಾತೆಯವರು ಕಳೆದ ಕೆಲವು ತಿಂಗಳಿನ ಹಿಂದೆ ನಿಧನರಾಗುವ ಮೂಲಕ ನಾಡು, ದೇಶಕ್ಕೆ ತುಂಬಲಾರದ ನಷ್ಟವಾಗಿದೆ ಎಂದರು.

ಕಾರ್ಯಕ್ರಮದಲ್ಲಿ ದತ್ತು ಹಡಪದ, ಶಿವಯೋಗೆಪ್ಪಾ ಎಸ್.ಬಿರಾದಾರ, ದಿನೇಶ್ ಮಿಶ್ರಾ, ಅಮರ ಬಂಗರಗಿ ಹಾಗೂ ವಿದ್ಯಾರ್ಥಿಗಳಿದ್ದರು.



# ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಶಾಲೆಗಳ ಪುನಶ್ಚೇತನಕ್ಕೆ ಹಳೆಯ ವಿದ್ಯಾರ್ಥಿಗಳ ಹೆಜ್ಜೆ

ಕಾರುಣಿ ಸಲಗರ, ಅಕ್ಕಲಕೋಟೆ: ಕರ್ನಾಟಕ–ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಮಾಧ್ಯಮ ಶಾಲೆಗಳ ನಿರಂತರ ಕುಸಿತದ ಬಗ್ಗೆ ಕಳವಳ ವ್ಯಕ್ತಪಡಿಸಿದ ಕಾರುಣಿ ಸಲಗರ ಹಳೆಯ ವಿದ್ಯಾರ್ಥಿಗಳು ಬುಧವಾರ ಕಾರುಣಿ ಸಲಗರ, ಸಿದ್ದೇಶ್ವರ ಪ್ರೌಢಶಾಲೆಯಲ್ಲಿ ಕನ್ನಡ ಭಾಷೆ ಮತ್ತು ಕನ್ನಡ ಮಾಧ್ಯಮ ಶಿಕ್ಷಣವನ್ನು ರಕ್ಷಿಸುವ ಮತ್ತು ಉತ್ತೇಜಿಸುವ ಕ್ರಮಗಳನ್ನು ಚರ್ಚಿಸಲು ಸಭೆಯನ್ನು ಆಯೋಜಿಸಿದ್ದರು.

ಸಭೆಯಲ್ಲಿ, ಸುಮಾರು ಎರಡು ದಶಕಗಳ ಹಿಂದೆ, ಮಹಾರಾಷ್ಟ್ರ ಗಡಿ ಗ್ರಾಮಗಳಲ್ಲಿ ಹಲವಾರು ಕನ್ನಡ ಮಾಧ್ಯಮ ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಯಶಸ್ವಿಯಾಗಿ ಕಾರ್ಯನಿರ್ವಹಿಸುತ್ತಿದ್ದವು ಎಂದು ನೆನಪಿಸಿಕೊಂಡರು. ಆದಾಗ್ಯೂ, ಇತ್ತೀಚಿನ ವರ್ಷಗಳಲ್ಲಿ, ವಿದ್ಯಾರ್ಥಿಗಳ ಪ್ರವೇಶ ಕಡಿಮೆಯಾಗುತ್ತಿರುವುದರಿಂದ ಕನ್ನಡ ಶಾಲೆಗಳ ಸಂಖ್ಯೆ ಕ್ರಮೇಣ ಕಡಿಮೆಯಾಗಿದೆ.

ಅಕ್ಕಲಕೋಟೆ ತಾಲ್ಲೂಕು ಮತ್ತು ಹತ್ತಿರದ ಗಡಿ ಗ್ರಾಮಗಳ ಅನೇಕ ಮನೆಗಳಲ್ಲಿ ಕನ್ನಡ ಮಾತನಾಡುವ ಪ್ರಾಥಮಿಕ ಭಾಷೆಯಾಗಿ ಮುಂದುವರಿದಿದ್ದರೂ, ಅನೇಕ ಪೋಷಕರು ತಮ್ಮ ಮಕ್ಕಳಿಗೆ ಇಂಗ್ಲಿಷ್ ಮತ್ತು ಮರಾಠಿ ಮಾಧ್ಯಮ ಶಾಲೆಗಳನ್ನು ಹೆಚ್ಚಾಗಿ ಆಯ್ಕೆ ಮಾಡುತ್ತಿದ್ದಾರೆ ಎಂದು ಭಾಗವಹಿಸುವವರು ಕಳವಳ ವ್ಯಕ್ತಪಡಿಸಿದರು. ಮಾತೃಭಾಷಾ ಶಿಕ್ಷಣದ ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಪ್ರಾಮುಖ್ಯತೆ ಮತ್ತು ಕನ್ನಡ ಮಾಧ್ಯಮ ಶಾಲೆಗಳಲ್ಲಿ ಅಧ್ಯಯನ ಮಾಡುವುದರಿಂದಾಗುವ ದೀರ್ಘಕಾಲೀನ ಪ್ರಯೋಜನಗಳ ಬಗ್ಗೆ ಪೋಷಕರಲ್ಲಿ ಜಾಗೃತಿ ಮೂಡಿಸುವ ಅಗತ್ಯವನ್ನು ಅವರು ಒತ್ತಿ ಹೇಳಿದರು.

ಕನ್ನಡ ಶಾಲೆಗಳ ಅವನತಿಗೆ ಬದಲಾಗುತ್ತಿರುವ ಶೈಕ್ಷಣಿಕ ಆದ್ಯತೆಗಳು, ಅಸಮರ್ಪಕ ಮೂಲಸೌಕರ್ಯ ಮತ್ತು ಹೆಚ್ಚಿನ ಸಾಂಸ್ಥಿಕ ಬೆಂಬಲದ ಅಗತ್ಯ ಸೇರಿದಂತೆ ವಿವಿಧ ಕಾರಣಗಳನ್ನು ಸಭೆಯಲ್ಲಿ ಚರ್ಚಿಸಲಾಯಿತು. ಗಡಿ ಪ್ರದೇಶದಲ್ಲಿ ಕನ್ನಡ ಭಾಷೆ ಮತ್ತು ಸಂಸ್ಕೃತಿಯನ್ನು ಸಂರಕ್ಷಿಸಲು ಸಮಾಜ, ಶಿಕ್ಷಣ ಸಂಸ್ಥೆಗಳು ಮತ್ತು ಸರ್ಕಾರಗಳಿಂದ ಸಾಮೂಹಿಕ ಪ್ರಯತ್ನಗಳು ಬೇಕಾಗುತ್ತವೆ ಎಂದು ಭಾಗವಹಿಸುವವರು ಒತ್ತಿ ಹೇಳಿದರು.

ಕರ್ನಾಟಕ–ಮಹಾರಾಷ್ಟ್ರ ಗಡಿ ಪ್ರದೇಶದಲ್ಲಿ ಕನ್ನಡ ಮಾಧ್ಯಮ ಶಾಲೆಗಳನ್ನು ರಕ್ಷಿಸಲು ಮತ್ತು ಬಲಪಡಿಸಲು ಮತ್ತು ಕನ್ನಡ ಭಾಷೆಯನ್ನು ಉತ್ತೇಜಿಸಲು ಮೀಸಲಾಗಿರುವ ಬಲವಾದ ಮತ್ತು ಶಾಶ್ವತ ಸಂಘಟನೆಯನ್ನು ಸ್ಥಾಪಿಸುವುದು ಸಭೆಯ ಪ್ರಮುಖ ನಿರ್ಣಯವಾಗಿತ್ತು.ಕರ್ನಾಟಕ ಮತ್ತು ಮಹಾರಾಷ್ಟ್ರ ಸರ್ಕಾರಗಳಿಗೆ ಜ್ಞಾಪಕ ಪತ್ರಗಳನ್ನು ಸಲ್ಲಿಸಲು ನಿರ್ಧರಿಸಿದರು, ಅಸ್ತಿತ್ವದಲ್ಲಿರುವ ಕನ್ನಡ ಮಾಧ್ಯಮ ಶಾಲೆಗಳನ್ನು ರಕ್ಷಿಸಲು, ಶೈಕ್ಷಣಿಕ ಮೂಲಸೌಕರ್ಯವನ್ನು ಸುಧಾರಿಸಲು, ಸಾಕಷ್ಟು ಬೋಧನಾ ಸಿಬ್ಬಂದಿಯನ್ನು ನೇಮಿಸಲು ಮತ್ತು ಗಡಿ ಪ್ರದೇಶಗಳಲ್ಲಿ ಕನ್ನಡ ಶಿಕ್ಷಣದ ಅಭಿವೃದ್ಧಿಗಾಗಿ ವಿಶೇಷ ಯೋಜನೆಗಳನ್ನು ಪರಿಚಯಿಸಲು ವಿನಂತಿಸಿದರು.ಸಭೆಯಲ್ಲಿ ಸಿದ್ದೇಶ್ವರ ಪ್ರೌಢಶಾಲೆಯ ಅಧ್ಯಕ್ಷರಾದ ಶ್ರೀ ಸಿದ್ದರಾಮ ಕಾಲಿಬಟ್ಟೆ, ಶ್ರೀ ಕಲ್ಲೂರ ಎಸ್.ಎಸ್,ವಿಜಯ್ ಕುಮಾರ್ ಕೋಲಿ,ಶ್ರೀ ಸುಭಾಷ್ ಭಡೋಲೆ, ಶ್ರೀ ಕೇಶಣ್ಣ ಲೋಹರ್ ಮತ್ತು ಹಲವಾರು ಹಳೆಯ ವಿದ್ಯಾರ್ಥಿಗಳು, ಶಿಕ್ಷಕರು, ಸಮಾಜ ಸೇವಕರು, ಶಿಕ್ಷಣ ತಜ್ಞರು ಮತ್ತು ಕನ್ನಡ ಪ್ರೇಮಿಗಳು ಭಾಗವಹಿಸಿದ್ದರು. ಕನ್ನಡ ಮಾಧ್ಯಮ ಶಾಲೆಗಳ ಪುನರುಜ್ಜೀವನ ಮತ್ತು ಬೆಳವಣಿಗೆ ಮತ್ತು ಭವಿಷ್ಯದ ಪೀಳಿಗೆಗೆ ಕನ್ನಡ ಭಾಷೆಯ ಸಂರಕ್ಷಣೆಗಾಗಿ ಒಟ್ಟಾಗಿ ಕೆಲಸ ಮಾಡುವುದಾಗಿ ಅವರು ಸರ್ವಾನುಮತದಿಂದ ಪ್ರತಿಜ್ಞೆ ಮಾಡಿದರು.

ಈ ಮಹತ್ವದ ಉಪಕ್ರಮಕ್ಕೆ ಅಮೂಲ್ಯವಾದ ಸಲಹೆಗಳು ಮತ್ತು ಪೂರ್ಣ ಹೃದಯದ ಬೆಂಬಲಕ್ಕಾಗಿ ಭಾಗವಹಿಸಿದ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸುವ ಮೂಲಕ ಸಭೆ ಮುಕ್ತಾಯವಾಯಿತು.



# ಕೇಂದ್ರ ಕಾರಾಗೃಹದಲ್ಲಿ ಸಹಾಯಕವಎಲೆಕ್ಟ್ರಿಕಲ್ ಟೆಕ್ನಿಷಿಯನ್ ತರಬೇತಿಗೆ ಚಾಲನೆ

ಕಲಬುರಗಿ :ಕಲಬುರಗಿ ಕೇಂದ್ರ ಕಾರಾಗೃಹ ಹಾಗೂ ಜನ ಶಿಕ್ಷಣ ಸಂಸ್ಥಾನ್ ಇವುಗಳ ಸಂಂ–ಯುಕ್ತಾಶ್ರಯದಲ್ಲಿ ಕಾರಾಗೃಹದ ಬಂದಿ ನಿವಾಸಿಗಳಲ್ಲಿ ಪತ್ರಿ ತಂಡಕ್ಕೆ 40 ಜನ ಶಿಬಿರಾರ್ಥಿಗಳನ್ನು ಆಯ್ಕೆ ಮಾಡಿ ಹಮ್ಮಿಕೊಳ್ಳಲಾಗಿದ್ದ ಸಹಾಯಕ ಎಲೆಕ್ಟ್ರಿಕಲ್ ಟಿಕ್ನಿಷಿಯನ್ ತರಬೇತಿ ಕಾರ್ಯಕ್ರಮವನ್ನು ಬುಧವಾರ ಕಲಬುರಗಿ ಕೇಂದ್ರ ಕಾರಾಗೃಹದಲ್ಲಿ ಕಲಬುರಗಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಶ್ರೀನಿವಾಸ ನವಲೆ ಅವರು ಚಾಲನೆ ನೀಡಿದರು.

ನಂತರ ಅವರು ಮಾತನಾಡಿ, ಸ್ವಾವಲಂಭಿಯಾಗಿ ಬದುಕನ್ನು ನಡೆಸುವುದಕ್ಕೆ ಈ ತರಬೇತಿಗಳು ತಮಗೆ ಸಹಾಯವಾಗಲಿದ್ದು, ಕಾರಾಗೃಹದಲ್ಲಿ ನೀಡುವ ವೃತ್ತಿಪರ ತರಬೇತಿಯ ಸದುಪಯೋಗ ಪಡೆದುಕೊಂಡು ಸಮಾಜದಲ್ಲಿ ಸ್ವಯಂ ಉದ್ಯೋಗವನ್ನು ಕಲ್ಪಿಸಿಕೊಂಡು ಉತ್ತಮವಾಗಿ ಬದುಕನ್ನು ನಡೆಸಬೇಕು ಎಂದರು.

ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನದ ನಿರ್ದೇಶಕ ಸುರೇಂದ್ರ ಪಾಟೀಲ್ ಮಾತನಾಡಿ, ತಮ್ಮ ಸಂಸ್ಥೆಯು ಸಾಮಾನ್ಯವಾಗಿ ಗ್ರಾಮೀಣ ಭಾಗದ ಜನರಿಗೆ ಉಚಿತವಾಗಿ ತರಬೇತಿಗಳನ್ನು ನೀಡುತ್ತಿದೆ. ಈ ಬಾರಿ ಕಲಬುರಗಿ ಕೇಂದ್ರ ಕಾರಾಗೃಹ ಬಂದಿ ನಿವಾಸಿಗಳಿಗೆ ತರಬೇತಿಗಳನ್ನು ನೀಡುವುದಕ್ಕೆ ತಮ್ಮ ಸಂಸ್ಥೆಯು ಮುಂದಾಗಿದ್ದು, ಪ್ರಾರಂಭದಲ್ಲಿ 40 ಶಿಬಿರಾರ್ಥಿಗಳಿಗೆ ಸಹಾಯಕ ಎಲೆಕ್ಟ್ರಿಕಲ್ ಟಿಕ್ನಿಷಿಯನ್ ತರಬೇತಿ ನೀಡುತ್ತಿದೆ. ಕಾರಾಗೃಹದ ಬಂದಿ ನಿವಾಸಿಗಳು ತರಬೇತಿಯ ಲಾಭ ಪಡೆದು ಸ್ವಯಂ ಉದ್ಯೋಗದ ಮುಖಾಂತರ ತಮ್ಮ ಜೀವನದ ಕಾಯಕಲ್ಪವನ್ನು ಕಟ್ಟಿಕೊಳ್ಳಬೇಕು ಎಂದರು.

ಈ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ ಕಲಬುರಗಿ ಕೇಂದ್ರ ಕಾರಾಗೃಹ ಮುಖ್ಯ ಅಧೀಕ್ಷಕ ರಾಕೇಶ್ ಕಾಂಬಳೆ ಮಾತನಾಡಿ, ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆಯು ಹಲವಾರು ತರಬೇತಿಗಳನ್ನು ನೀಡುವ ಉದ್ದೇಶ ಹೊಂದಿದ್ದು, ಅದರ ಪ್ರಯುಕ್ತ, ಗುಲಬರ್ಗಾ ಜನ ಶಿಕ್ಷಣ ಸಂಸ್ಥಾನ್ ಮುಖಾಂತರ ಆಯ್ದ 40 ಜನ ಶಿಕ್ಷಾ ಬಂದಿಗಳಿಗೆ ಎಲೆಕ್ಟ್ರಿಶಿಯನ್ ತರಬೇತಿಯನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಚನ್ನಪ್ಪ ಯಟಗಲ್ ಹಾಗೂ ಸಂಸ್ಥೆಯ ಸಹಾಯಕ ಆಡಳಿತಾಧಿಕಾರಿ ಭೀಮಾಶಂಕರ್ ಡಾಂಗೆ ಅವರು ಮಾತನಾಡಿದರು.

ಈ ಕಾರ್ಯಕ್ರಮದಲ್ಲಿ ಜನ ಶಿಕ್ಷಣ ಸಂಸ್ಥೆಯ ಸಿಬ್ಬಂದಿಗಳಾದ ಬಸವರಾಜ ಡಾಬಾ, ರಾಜಶೇಕರ್ ಬಿರಾದಾರ್, ತರಬೇತಿದಾರರಾದ ಸೈಯಾದ್ ಬಿಲಾಲ್ ಹಾಗೂ ಸಂಸ್ಥೆಯ ಜೈಲರ್ ಆದ ಶ್ರೀಮಂತಗೌಡ ಪಾಟೀಲ್ ಹಾಗೂ ಕಾರಾಗೃಹದ ಸಿಬ್ಬಂದಿಗಳು ಭಾಗವಹಿಸಿದ್ದರು.

ಪ್ರಾರಂಭದಲ್ಲಿ ಸಂಸ್ಥೆಯ ಸಹಾಯಕ ಅಧೀಕ್ಷಕ ಬಿ ಸುರೇಶ್ ಸ್ವಾಗತಿಸಿದರು. ಈ ಸಂಸ್ಥೆಯ ಶಿಕ್ಷಕ ನಾಗರಾಜ ಮೂಲಗೆ ಕಾರ್ಯಕ್ರಮ ನಿರ್ವಹಿಸಿ ಕೊನೆಯಲ್ಲಿ ವಂದಿಸಿದರು. ಈ ಸಂಸ್ಥೆಯ ಬಂದಿ ಶಿವಶಂಕರ ಪ್ರಾರ್ಥನಾ ಗೀತೆಯನ್ನು ಹಾಡಿದರು.



# ಬಿಡದಿಗೊಂದು ನ್ಯಾಯ?, ಆಳಂದಗೊಂದು ನ್ಯಾಯ ಸರಿಯೇ?

ಆಳಂದ: ರೈತರ ಜಮೀನು ಖರೀದಿಸುವಲ್ಲಿ ಸರ್ಕಾರ ಬಿಡದಿಗೊಂದು ನ್ಯಾಯ ಆಳಂದಗೊಂದು ನ್ಯಾಯ ಪದ್ಧತಿ ಅನುಸರಿಸುತ್ತಿರುವುದು ಸರಿಯೇ ಎಂದು ಕಲಬುರಗಿ ಜಿಲ್ಲಾ ಬಿಜೆಪಿ ರೈತ ಮೋರ್ಚಾ ಉಪಾಧ್ಯಕ್ಷ ಸಿದ್ದು ಹಿರೋಳಿ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ಪ್ರಶ್ನಿಸಿದ್ದಾರೆ.

ಬುಧುವಾರ ಆಳಂದ ತಹಸೀಲದಾರರ ಮೂಲಕ ಮುಖ್ಯಮಂತ್ರಿಗಳಿಗೆ ಬರೆದ ಮನವಿ ಪತ್ರದಲ್ಲಿ ಹಲವು ವಿಷಯ ಪ್ರಸ್ತಾಪಿಸುರುವ ಅವರು, ಆಳಂದ ತಾಲೂಕಿನಲ್ಲಿ ವಿಂಡ್ ಪವರ್ ಕಂಪನಿಗಳಿಂದ ರೈತರಿಗಾಗುತ್ತಿರುವ ಅನ್ಯಾಯವನ್ನು ಸರಿಪಡಿಸಿ ಗಡಿಭಾಗದ ಬಡ ರೈತರಿಗೆ ನ್ಯಾಯ ದೊರಕಿಸಿ ಕೊಡಲು ಒತ್ತಾಯಿಸಿದ್ದಾರೆ.

ಆಳಂದ ತಾಲೂಕಿನಲ್ಲಿ ಸುಮಾರು 2–3 ವರ್ಷಗಳಿಂದ ವಿಂಡ್ ಪವರ್ ಕಂಪನಿಯವರು ರೈತರ ಜಮೀನಿಗಳಲ್ಲಿ ಪವನ ವಿದ್ಯುತ್ ಉತ್ಪಾದನಾ ಘಟಕಗಳನ್ನು ಕೂಡಿಸುತ್ತಿದ್ದಾರೆ. ಒಂದು ಘಟಕಕ್ಕೆ 10.00 ಎಕರೆ ಜಮೀನು ಖರೀದಿಸಬೇಕೆಂಬ ನಿಯಮವಿದ್ದರೂ ಕೂಡ ಕಂಪನಿಯವರು ಸರ್ಕಾರದ ಎಲ್ಲಾ ನಿಯಮಗಳನ್ನು ಗಾಳಿಗೆ ತೂರಿ ದಲ್ಲಾಳಿಗಳ ಮುಖಾಂತರ ಮನಸೋ ಇಚ್ಛೇ ರೈತರ ಜಮೀನುಗಳನ್ನು ಕಬಳಿಸುತ್ತಿದ್ದಾರೆ. ರೈತರ ಗೋಳು ಕೇಳುವರ್ಯಾರು? ಎಂದು ಪ್ರಶ್ನಿಸಿದ್ದಾರೆ. ಇತ್ತೀಚಿಗೆ ಬಾಗಲಕೋಟೆ ಉಪಚುನಾವಣೆಗೆ ಪ್ರಚಾರಕ್ಕೆ ಬಂದ ಸಂದರ್ಭದಲ್ಲಿ ಮಾಜಿ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯರವರು ಆಲಮಟ್ಟಿ ಹಿನ್ನೀರಿನಲ್ಲಿ ಮುಳುಗಡೆಯಾಗುವ ನೀರಾವರಿ ಜಮೀನಿಗೆ 40.00 ಲಕ್ಷ ರೂ. ಪ್ರತಿ ಎಕರೆಗೆ ಒಣ ಬೇಸಾಯ ಜಮೀನಿಗೆ 30 ಲಕ್ಷ. ರೂ ಪ್ರತಿ ಎಕರೆಗೆ ನೀಡುವುದಾಗಿ ಸರ್ಕಾರದ ನಿರ್ಧಾರವನ್ನು ತಿಳಿಸಿರುತ್ತಾರೆ.

# ಶರಣಬಸವ ವಿವಿಯಿಂದ ಅನುಪಮ್ ಅಶೋಕ ಪಾಟೀಲಗೆ ಪಿಎಚ್. ಡಿ.



ಕಲಬುರಗಿ: ಶ್ರೀ ಅನುಪಮ್ ಅಶೋಕ ಪಾಟೀಲ ಅವರು ಮಂಡಿಸಿದ "ಐಡೆಂಟಿಫಿಕೇಶನ್ ಆಫ್ ಡಿಸಿಸ್ಡ್ ಪೀಜನ್ ಪೀ ಲೀವ್ಸ್ ಯುಸಿಂಗ್ ಇಮೇಜ್ ಪ್ರೋಸೆಸಿಂಗ್‌ಂಡ್ ಮಷೀನ್ ಲರ್ನಿಂಗ್ ಅಪ್ರೋಚೆಸ್" ಎಂಬ ಮಹಾಪ್ರಭಂದಕ್ಕೆ ಕಲಬುರಗಿಯ ಶರಣಬಸವ ವಿಶ್ವವಿದ್ಯಾಲಯದಿಂದ ಪಿಎಚ್. ಡಿ. ಪದವಿ ಪಡೆದಿದ್ದಾರೆ. ವಿವಿಯ ಕಂಪ್ಯೂಟ–ರ್ ಅಪ್ಲೀಕೇಶನ್ ನಿಕಾಯದ ಡಾ. ವಿರುಪಾಕ್ಷಪ್ಪ ಇವರ ಮಾರ್ಗದರ್ಶನದಲ್ಲಿ ಸಂಶೋಧನೆ ಕೈಗೊಂಡಿದ್ದಾರೆ.

# ರೈತರಿಗೆ ಎಪ್‌ಐಆರ್ ಬಗ್ಗೆ ಮಾರ್ಗದರ್ಶನ ನೀಡಲು: ಕರವೇ ಒತ್ತಾಯ



ಕಲಬುರಗಿ: ರಾಜ್ಯದಲ್ಲಿ ನಡೆಯುತ್ತಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆಯ ಕುರಿತು ಗ್ರಾಮೀಣ ಭಾಗದಲ್ಲಿನ ಕೃಷಿ ಕೂಲಿ ಕಾರ್ಮಿಕರು, ಅನಕ್ಷರಸ್ಥರು, ಸೇರಿದಂತೆ ಬಹುತೇಕರಿಗೆ ಅಧಿಕಾರಿಗಳು ಮಾರ್ಗದರ್ಶನ ನೀಡಬೇಕು ಕರವೇ(ಪ್ರವೀಣ ಶೆಟ್ಟಿ) ಬಣದ ಕಲಬುರಗಿ ತಾಲೂಕು ಅಧ್ಯಕ್ಷ ವಿಜಯಕುಮಾರ ಅಂಕಲಗಿ ಅವರು ಒತ್ತಾಯಿಸಿದರು. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ ಅವರು, ಮತಗಟ್ಟೆ ಅಧಿಕಾರಿಗಳು ಮತದಾರರಿಗೆ ಎನ್ಯೂಮರೇಷನ್ ನಮೂನೆಗಳನ್ನು ನೀಡಿದ ನಂತರ, ಅವುಗಳ ಮಹತ್ವದ ಕುರಿತು, ಜನರಿಗೆ ತಿಳಿವಳಿಕೆ ಮೂಡಿಸಬೇಕು,45 ವರ್ಷ ಮೇಲ್ಪಟ್ಟವರು,ಯಾವ ಭಾಗದಲ್ಲಿ ಅರ್ಜಿ ನಮೂನೆ ಭರ್ತಿ ಮಾಡಬೇಕು, 45 ವರ್ಷದೊಳಗಿನವರು ಯಾವ ಭಾಗದಲ್ಲಿ ಭರ್ತಿ ಮಾಡಬೇಕು ಎನ್ನುವ ಕುರಿತು, ಪಟ್ಟಣದಲ್ಲಿ ಪ್ರತಿಯೊಂದು ವಾರ್ಡಗಳಲ್ಲಿ ಬಹಿರಂಗ ಸಭೆಗಳನ್ನು ಆಯೋಜಿಸಿ, ಮಾದರಿ ನಮೂನೆಗಳನ್ನು ಸಿದ್ಧಪಡಿಸಿ, ಪ್ರಾತ್ಯಕ್ಷಿಕೆ ಕೊಡಬೇಕು. ಹಳ್ಳಿಗಳಲ್ಲಿ ಆಯಾ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಪ್ರತಿಯೊಂದು ಹಳ್ಳಿಯಲ್ಲೂ ಜನರಿಗೆ ಜಾಗೃತಿ ಮೂಡಿಸುವಂತಹ ಕೆಲಸವನ್ನು ಮಾಡಬೇಕಿದೆ ಎಂದರು. ಅನಕ್ಷರಸ್ಥರು ಜನನ ಪ್ರಮಾಣ ಪತ್ರಗಳನ್ನು ಮಾಡಿಸಿರುವುದಿಲ್ಲ. ಅಂತವರಿಗೆ ಮಾಹಿತಿ ನೀಡಬೇಕು ಎಂದರು.

# ಪ್ರತಿಷ್ಠಿತ 'ಈಶಾವಾಸ್ಯ' ಪ್ರಶಸ್ತಿಗೆ ಶ್ರೀ ಸತ್ಯನಾರಾಯಣ ಮುಜುಮದಾರ ಆಯ್ಕೆ



ಕಲಬುರಗಿ: ಶ್ರೀ ಶುಕ್ಲ ಯಜುರ್ವೇದ ಯುವಕ ಸಂಘ (ನೋಂ), ಬೆಂಗಳೂರು ವತಿಯಿಂದ ಜುಲೈ 12ರಂದು ಬೆಂಗಳೂರಿನ ದಿ ಮಿಥಿಕ್ ಸೊಸೈಟಿ ಸಭಾಂಗಣದಲ್ಲಿ "ಪ್ರತಿಭಾ ಪುರಸ್ಕಾರ–2026" ಹಾಗೂ ಪ್ರತಿಷ್ಠಿತ "ಈಶಾವಾಸ್ಯ" ಪ್ರಶಸ್ತಿ ಪ್ರದಾನ ಸಮಾರಂಭ ನಡೆಯಲಿದೆ.

ಈ ವರ್ಷದ 'ಈಶಾವಾಸ್ಯ' ಪ್ರಶಸ್ತಿಗೆ ಹಿರಿಯ ಸಂಶೋಧಕ,ಲೇಖಕ ಹಾಗೂ ವೈದಿಕ ಪರಂಪರೆಯ ಪ್ರಚಾರಕರಾದ ರಾಯಚೂರಿನ ನಿವಾಸಿಗಳಾದ ಶ್ರೀ ಋಷಿಕಂದ ಸತ್ಯನಾರಾಯಣ ಮುಜುಮದಾರ ಆಯ್ಕೆಯಾಗಿದ್ದಾರೆ. ಮಹರ್ಷಿ ಯಾಜ್ಞವಲ್ಕ್ಯರಿಗೆ ಸಂಬಂಧಿಸಿದ ಭಾರತದ ವಿವಿಧ ರಾಜ್ಯಗಳ ಪುಣ್ಯಕ್ಷೇತ್ರಗಳನ್ನು ಸಂಶೋಧಿಸಿ, ಅವುಗಳ ಇತಿಹಾಸವನ್ನು ದಾಖಲಿಸಿ, ಹಲವು ಕೃತಿಗಳ ಮೂಲಕ ಸಮಾಜಕ್ಕೆ ಪರಿಚಯಿಸಿರುವ ಅವರ ಸೇವೆಯನ್ನು ಗುರುತಿಸಿ ಈ ಗೌರವ ನೀಡಲಾಗುತ್ತಿದೆ.

ನೇಪಾಳ, ಬಿಹಾರ, ಉತ್ತರ ಪ್ರದೇಶ, ರಾಜಸ್ಥಾನ, ಗುಜರಾತ್, ತಮಿಳುನಾಡು ಹಾಗೂ ಕರ್ನಾಟಕ ಸೇರಿದಂತೆ ವಿವಿಧ ರಾಜ್ಯಗಳಲ್ಲಿ ಯಾಜ್ಞವಲ್ಕ್ಯರ ಕ್ಷೇತ್ರಗಳ ಕುರಿತು ಅವರು ನಡೆಸಿದ ಸಂಶೋಧನೆ ವೈದಿಕ ಪರಂಪರೆಯ ಸಂರಕ್ಷಣೆಗೆ ಮಹತ್ವದ ಕೊಡುಗೆಯಾಗಿದೆ ಎಂದು ಸಂಘ ತಿಳಿಸಿದೆ. ಇದೇ ಸಂದರ್ಭದಲ್ಲಿ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ವಿದ್ಯಾರ್ಥಿಗಳಿಗೆ "ಪ್ರತಿಭಾ ಪುರಸ್ಕಾರ–2026" ಪ್ರದಾನ ಮಾಡಲಾಗುವುದು. ಸಮಾಜದ ಹಿರಿಯರು, ವೇದಪಂಡಿತರು, ವಿದ್ವಾಂಸರು ಹಾಗೂ ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ.

# ಡಾ. ಫಾರುಕ್ ಮಣ್ಣೂರ ನೇತೃತ್ವದಲ್ಲಿ ಎಐಆರ್ ಬಗ್ಗೆ ಜಾಗೃತಿ ಸಭೆ

ಕಲಬುರಗಿ:ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಐಆರ್) ಪ್ರಕ್ರಿಯೆಯನ್ನು ಪ್ರತಿಯೊಬ್ಬ ನಾಗರಿಕರು ಜವಾಬ್ದಾ–ರಿಯಿಂದ ಪೂರ್ಣಗೊಳಿಸಿ, ಯಾವುದೇ ಅರ್ಹ ಮತದಾರರ ಹೆಸರು ಮತಪಟ್ಟಿಯಿಂದ ಕೈಬಿಡದಂತೆ ಎಚ್ಚರಿಕೆ ವಹಿಸಬೇಕು ಎಂದು ಸಮಾಜ ಸೇವಕ ಡಾ. ಫಾರುಕ್ ಮಣ್ಣೂರ ಹೇಳಿದ್ದರು.

ಶಹಾಬಾದ ಪಟ್ಟಣದ ಜಾಮಿಯಾ ಮಸ್ಜಿದ ನಲ್ಲಿ ಸಮಾಜ ಸೇವಕ ಡಾ. ಫಾರುಕ್ ಮಣ್ಣೂರ ಅವರು ಏರ್ಪಡಿಸಿದ ಎಐಆರ್ ಬಗ್ಗೆ ಜಾಗೃತಿ ಸಭೆಗೆ ಚಾಲನೆ ನೀಡಿ ಮಾತನಾಡಿ ಮತದಾರರ ಪಟ್ಟಿಯ ಪರಿಷ್ಕರಣೆ, ಎಐಆರ್ ಅರ್ಜಿ ಭರ್ತಿ ವಿಧಾನ, ಅಗತ್ಯ ದಾಖಲೆಗಳು ಹಾಗೂ ಸಾರ್ವಜನಿಕರು ಅನುಸರಿಸಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಸವಿಸ್ತಾರವಾಗಿ ಮಾಹಿತಿ ನೀಡಿ ಮಾತನಾಡಿ . ಎಐಆರ್ ಫಾರಂ ಅನ್ನು ಪ್ರತಿಯೊಬ್ಬ ಮತದಾರರು ಸ್ವತಃ ಪರಿಶೀಲಿಸಿ ನಿಖರ ಮಾಹಿತಿಯೊಂದಿಗೆ ಭರ್ತಿ ಮಾಡಬೇಕು ಎಂದು ತಿಳಿಸಿದರು.

# ಜು.29ರೊಳಗೆ ಮತದಾರರ ವಿವರ ದೃಢೀಕರಿಸಿ : ಶಾಸಕ ಸವದಿ

■ ಉದಯರಶ್ಮಿ ದಿನಪತ್ರಿಕೆ



ಅಥಣಿ: ಚುನಾವಣಾ ಆಯೋಗ ಹಮ್ಮಿಕೊಂಡಿರುವ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಅಭಿಯಾನದಲ್ಲಿ ಪ್ರತಿಯೊಬ್ಬ ಮತದಾರರು ಕಡ್ಡಾಯವಾಗಿ ಭಾಗವಹಿಸಿ, ಮನೆಗೆ ಬರುವ ಬೂತ್ ಮಟ್ಟದ ಅಧಿಕಾರಿಗಳಿಗೆ (ಬಿಎಲ್‌ಒ) ಅಗತ್ಯ ದಾಖಲೆಗಳನ್ನು ನೀಡಿ ಸಹಕರಿಸಬೇಕು ಎಂದು ಶಾಸಕ ಲಕ್ಷ್ಮಣ ಸವದಿ ಮನವಿ ಮಾಡಿದರು.

ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿ, ಚುನಾವಣಾ ಆಯೋಗವು ಕರ್ನಾಟಕದಲ್ಲಿ ವಿಶೇಷ ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯಕ್ರಮವನ್ನು ಜೂನ್ 30ರಿಂದ ಜುಲೈ 29ರವರೆಗೆ ಹಮ್ಮಿಕೊಂಡಿದೆ. ಈ ಅವಧಿಯಲ್ಲಿ ಅಧಿಕಾರಿಗಳು ಹಾಗೂ ಬೂತ್ ಮಟ್ಟದ ಅಧಿಕಾರಿಗಳು (ಬಿಎಲ್‌ಒ) ಮನೆ ಮನೆಗೆ ಭೇಟಿ ನೀಡಿ ಅಗತ್ಯ ನಮೂನೆಗಳನ್ನು (ಫಾರ್ಮ್) ವಿತರಿಸಲಿದ್ದಾರೆ. ಮತದಾರರು ಅವುಗಳನ್ನು ಸರಿಯಾಗಿ ಭರ್ತಿ ಮಾಡಿ ಸಂಬಂಧಿತ ಅಧಿಕಾರಿಗಳಿಗೆ ಸಲ್ಲಿಸಬೇಕು ಎಂದು ತಿಳಿಸಿದರು.

ಯಾರಾದರೂ ಈ ಪ್ರಕ್ರಿಯೆಯಲ್ಲಿ ಭಾಗವಹಿಸದೇ ನಿರ್ಲಕ್ಷ್ಯ ವಹಿಸಿದರೆ, ಅವರ ಹೆಸರು ಮತದಾರರ ಪಟ್ಟಿಯಿಂದ ಕೈಬಿಡುವ ಸಾಧ್ಯತೆ ಇದೆ. ಇದರಿಂದ ಮುಂದಿನ ಚುನಾವಣೆಯಲ್ಲಿ ಮತದಾನದ ಹಕ್ಕು ಕಳೆದುಕೊಳ್ಳುವ ಪರಿಸ್ಥಿತಿ ಉಂಟಾಗಬಹುದು. ಆದ್ದರಿಂದ ಯಾವುದೇ ನಿರ್ಲಕ್ಷ್ಯ ತೋರದೆ ಎಲ್ಲರೂ ಈ ಅಭಿಯಾನದಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕು ಎಂದು ಹೇಳಿದರು.

ಮತದಾನದ ಹಕ್ಕು ಪ್ರತಿಯೊಬ್ಬ ಭಾರತೀಯ ನಾಗರಿಕನ ಅಮೂಲ್ಯ ಹಕ್ಕಾಗಿದ್ದು, ಅದನ್ನು ಸಂರಕ್ಷಿಸುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ. ಆದ್ದರಿಂದ ಜುಲೈ 29ರೊಳಗೆ ಅಗತ್ಯ ನಮೂನೆಗಳನ್ನು ಭರ್ತಿ ಮಾಡಿ ಸಲ್ಲಿಸುವ ಮೂಲಕ ತಮ್ಮ ಹೆಸರನ್ನು ಮತದಾರರ ಪಟ್ಟಿಯಲ್ಲಿ ಖಚಿತಪಡಿಸಿಕೊಳ್ಳಬೇಕು. ಮನೆಗೆ ಭೇಟಿ ನೀಡುವ ಬಿಎಲ್‌ಒಗಳಿಗೆ ಸಂಪೂರ್ಣ ಸಹಕಾರ ನೀಡುವಂತೆ ಶಾಸಕ ಲಕ್ಷ್ಮಣ ಸವದಿ ಸಾರ್ವಜನಿಕರಲ್ಲಿ ಮನವಿ ಮಾಡಿದರು.

# ದಿನಕ್ಕೊಂದು ವಚನ, ಹಳಕಟ್ಟಿಯವರಿಗೆ ನಿಜ ನಮನ: ನಾರಾಯಣ ಶಾಸ್ತ್ರಿ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ವಚನಗಳಿಗಾಗಿ ಇದ್ದ ಶ್ರೀಮಂತಿಕೆಯನ್ನು ತ್ಯಜಿಸಿದವರು, ವಕೀಲಿ ವೃತ್ತಿಯನ್ನು ಬಿಟ್ಟವರು, ಮನೆಯನ್ನೇ ಮಾರಿ ಮುದ್ರಣಾಲಯ ತೆರೆದವರು, ಹರಕು ಅಂಗಿ ತೊಟ್ಟು ಹೊಸ ಪುಸ್ತಕ ನೀಡಿದವರು, ಕರುನಾಡಿನಲ್ಲಿ ವಚನಗಳ ಗುಡಿ ಕಟ್ಟಿ ಎಲ್ಲರ ಮನೆಮನಗಳಿಗೆ ವಚನಗಳ ಮುಟ್ಟಿಸಿದವರು ಡಾ.ಫಕೀರಪ್ಪ ಗುರುಬಸಪ್ಪ ಹಳಕಟ್ಟಿಯವರು ಪ್ರಾತ: ಸ್ಮರಣೀಯರು ಎಂದು ಮುಖ್ಯೋಪಾಧ್ಯಾಯ ಆಶು ಕವಿ ನಾರಾಯಣ ಶಾಸ್ತ್ರಿ ಹೇಳಿದರು.

ಅವರು ಪಿ.ಎಂ.ಶ್ರೀ.ಕರ್ನಾಟಕ ಪಬ್ಲಿಕ್ ಶಾಲೆ ಕುಂಬಾರಹಳ್ಳದಲ್ಲಿ ನಡೆದ ಹಳಕಟ್ಟಿಯವರ ಜನ್ಮದಿನೋತ್ಸವದಲ್ಲಿ ಮಾತನಾಡುತ್ತಾ, ಮೊಟ್ಟ ಮೊದಲ ಬಾರಿಗೆ ವಚನಗಳನ್ನು ಮುದ್ರಿಸಿದ್ದು, ಇಂಗ್ಲಿಷ್ ಬಾಷೆಗೆ ಭಾಷಾಂತರಿಸಿದ್ದು, ವಚನ ಗಾಯನ ಮಾಡಿಸಿದ್ದು ತ್ಯಾಗಜೀವಿ ಹಳಕಟ್ಟಿಯವರು. ವಚನಗಳ ಉಳುವಿಗಾಗಿ ಉಳವಿಯತ್ತ ಸಾಗಿದ ಎಲ್ಲಾ ಶರಣಶರಣೆಯರ ವಚನಗಳನ್ನು ರಕ್ಷಿಸಿ ಜಗತ್ತಿಗೆ ವಚನಗಳ ಬೆಳಕನ್ನು ಹರಡಿದವರು. ನಾವೆಲ್ಲರೂ ಪ್ರತಿದಿನವೂ ವಚನಗಳನ್ನು ಓದುತ್ತಾ, ಆ ತತ್ವಗಳನ್ನು ಅಳವಡಿಸಿಕೊಳ್ಳುವುದೇ ಅವರಿಗೆ ನಾವು ಸಲ್ಲಿಸಬೇಕಾದ ಶ್ರದ್ಧಾಂಜಲಿ ಎಂದು ಹೇಳಿದರು.

ಶಿಕ್ಷಕ ಸಂಗನಬಸವ ಉಟಗಿ ಮಾತನಾಡಿ ಹಳಕಟ್ಟಿಯವರು ವಚನಗಳ ಬಟ್ಟೆಯನ್ನು ನೇಯ್ದರು. ಇಡೀ ಜೀವನವನ್ನು ವಚನಕ್ಕೆ ಅರ್ಪಿಸಿದರು. ಬಂದ ಅಧಿಕಾರವನ್ನು ಜನಸೇವೆಗಾಗಿ ಬಳಸಿದರು. ವಿಜಯಪುರದಲ್ಲಿ ಬಿ ಎಲ್ ಡಿ ಇ ಸಂಸ್ಥೆ, ಸಿದ್ದೇಶ್ವರ ಬ್ಯಾಂಕನ್ನು ಸ್ಥಾಪಿಸಿ ಇತಿಹಾಸ ನಿರ್ಮಿಸಿದರು. ಅವರ ಜೀವನ ನಮಗೆ ಆದರ್ಶವಾಗಬೇಕು, ವಚನದಲ್ಲಿರುವ ಆದರ್ಶವನ್ನು ನಾವು ಅಳವಡಿಸಿಕೊಳ್ಳಬೇಕು. ನಡೆದಾಡುವ ದೇವರಾಗಿದ್ದ ಸಿದ್ದೇಶ್ವರರು ನಮ್ಮ ಆದರ್ಶವಾಗಬೇಕು ಎಂದು ಹೇಳಿದರು.

ಶಿಕ್ಷಕ ಅಶೋಕ ಬಿರಾದಾರ ಪಾಟೀಲ ಮಾತನಾಡಿ ಮಹಾಪುರುಷರ ಸಾಧನೆಗಳ ಅವಲೋಕನದಿಂದ ನಮ್ಮಲ್ಲಿಯೂ ಸಾಧಿಸುವ ಛಲ ಮೂಡುತ್ತದೆ. ತ್ಯಾಗ ಮನೋಭಾವನೆ ಬೆಳೆಯುತ್ತದೆ. ನಾವೆಲ್ಲರೂ ಹಳಕಟ್ಟಿಯವರು ಹಾಕಿಕೊಟ್ಟ ವಚನದ ಮಾರ್ಗದಲ್ಲಿ ಸಾಗೋಣ ,ಧರ್ಮ ಮಾರ್ಗದಲ್ಲಿ ಸಾಗೋಣ ಎಂದು ಹೇಳಿದರು.

ಶಿಕ್ಷಕಿಯರಾದ ಶಾರದಾ ಮಠ, ಮಂಜುಳಾ ಕಡಕೋಳ,ಆಸೀಫಾ ಭಾನು ಮೋಮಿನ್,ಶಕುಂತಲಾ ಬಿರಾದಾರ ಉಪಸ್ಥಿತರಿದ್ದರು.

ಶಿಕ್ಷಕಿ ಸವಿತಾ ಬೆನಕಟ್ಟಿ ಸ್ವಾಗತಿಸಿ ನಿರೂಪಿಸಿದರು. ಚಿತ್ರಕಲಾ ಶಿಕ್ಷಕರ ಚಂದ್ರಕಾಂತ ಪೊಲೀಸ್ ವಂದಿಸಿದರು.

ಮಕ್ಕಳು ವಚನಕ್ಕೆ ಧ್ವನಿಯಾಗಿ ಕಾರ್ಯಕ್ರಮಕ್ಕೆ ಮೆರಗು ನೀಡಿದರು.

# ಸರ್ಕಾರಿ ಪದವಿ ಕಾಲೇಜಿನ ಬಿ.ಕಾಂ ವಿದ್ಯಾರ್ಥಿಗಳ ಉತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ





ವಿಜಯಪುರ: ಸಾಧನೆಗೈಯ್ಯುವವರಿಗೆ ಬಡತನ ಎಂದೂ ಅಡ್ಡಿ ಬರುವುದಿಲ್ಲ ಮತ್ತು ಸತತ ಪ್ರಯತ್ನ, ಕಠಿಣ ಪರಿಶ್ರಮ ಮತ್ತು ದಿಟ್ಟ ಛಲವೊಂದಿದ್ದರೆ ಎಂತಹ ಸಾಧನೆಯನ್ನು ಮಾಡಬಹುದೆಂಬುದು ವಿಜಯಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ವಿದ್ಯಾರ್ಥಿಗಳು ಬಿ.ಕಾಂ ಪದವಿ ಪರೀಕ್ಷೆಯಲ್ಲಿ ಪಡೆದ ಫಲಿತಾಂಶದಿಂದ ಸಾಬೀತಾಗಿದೆ. ಈ ನಿಟ್ಟಿನಲ್ಲಿ ನಗರದ ನವಭಾಗದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವ್ಯಾಸಂಗ ಮಾಡುತ್ತಿರುವ ಗೀತಾ ಮಿಸ್ಕಿನ್ (ಆಂಗ್ಲ ಮಾಧ್ಯಮ) ಇವಳು ಶೇ 95.4% ಅಂಕ ಪಡೆದು ಪ್ರಥಮ ಕಾಲೇಜಿಗೆ ಸ್ಥಾನ, ಅಶ್ವಿನಿ ಕುಂಬಾರ ಇವಳು ಶೇ. 94.8% ಅಂಕ ಗಳಿಸಿ ದ್ವಿತಿಯ ಸ್ಥಾನ ಹಾಗೂ ಶಂಕ್ರಮ್ಮ ನಾಗತಾಣ ಇವಳು ಶೇ. 87.28%% ಅಂಕ ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ. ವಿದ್ಯಾರ್ಥಿಗಳ ಶೈಕ್ಷಣಿಕ ಸಾಧನೆಗೆ ವಿಜಯಪುರ ನಗರ ಶಾಸಕರು ಹಾಗೂ ಕಾಲೇಜು ಅಭಿವೃದ್ಧಿ ಸಮಿತಿ ಅಧ್ಯಕ್ಷರೂ ಆದ ಬಸನಗೌಡ. ಆರ್. ಪಾಟೀಲ (ಯತ್ನಾಳ) ಇವರು, ಕಾಲೇಜಿನ ಸಿ.ಡಿ.ಸಿ ಸದಸ್ಯರು, ಕಾಲೇಜಿನ ಪ್ರಾಂಶುಪಾಲರಾದ ಡಾ. ಎ.ಐ.ಹಂಜಗಿ, ವಾಣಿಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥ ಪ್ರೊ. ಎಂ.ಎಸ್.ಖೊದ್ನಾಪೂರ, ಎಂ.ಕಾಂ ವಿಭಾಗದ ಸಂಚಾಲಕ ಡಾ. ಸಂತೋಷ ಕಬಾಡೆ ಹಾಗೂ ಪ್ರಾಧ್ಯಾಪಕರಾದ ಡಾ. ಐ.ಎಸ್.ಶಿವಶರಣರ, ಡಾ. ಸಂತೋಷ ಕಬಾಡೆ, ಪ್ರೊ. ಆರ್.ಐ.ಜೋಗೂರ, ಪ್ರೊ. ವ್ಹಿ.ಆರ್. ಕಬಾಡೆ, ಡಾ. ಮಮತಾ ಬನ್ನೂರ ಹಾಗೂ ಕಾಲೇಜಿನ ಎಲ್ಲ ಬೋಧಕ–ಬೋಧಕೇತರ ಸಿಬ್ಬಂದಿ ವರ್ಗದವರು ಅಭಿನಂದನೆ ಸಲ್ಲಿಸಿದ್ದಾರೆ.

> "ನಮ್ಮ ಕಾಲೇಜು ಯಾವ ಖಾಸಗಿ ಕಾಲೇಜುಗಳಿಗಿಂತ ಕಮ್ಮಿಯಿಲ್ಲ. ವಿದ್ಯಾರ್ಥಿ ಕೇಂದ್ರಿತ ಬೋಧನೆ–ಕಲಿಕೆ, ಗುಣಮಟ್ಟದ ಶಿಕ್ಷಣ ಮತ್ತು ವಿದ್ಯಾರ್ಥಿಗಳ ವ್ಯಕ್ತಿತ್ವ ವಿಕಸನಕ್ಕೆ ಪೂರಕವಾದ ಶೈಕ್ಷಣಿಕ ಪರಿಸರವನ್ನು ಹೊಂದಿದ್ದು, ವಿದ್ಯಾರ್ಥಿಗಳ ಭವಿಷ್ಯ ರೂಪುಗೊಳ್ಳುವಲ್ಲಿ ಪ್ರಾಂಶುಪಾಲರು ಹಾಗೂ ಪ್ರಾಧ್ಯಾಪಕರು ಶ್ರಮಿಸುತ್ತಿದ್ದಾರೆ. ವಿಶೇಷವಾಗಿ ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡುವ ಸಂಸ್ಥೆ ಇದಾಗಿದೆ. ಪ್ರಸ್ತುತ ನಾನು ಬಿ.ಕಾಂ ಜೊತೆಗೆ ಸಿ.ಎ. ಫೌಂಡೇಷನ್ ವೃತ್ತಿಪರ ಕೋರ್ಸ ಮಾಡುತ್ತಿದ್ದು, ನನ್ನಂತಹ ಅದೇಷ್ಟೋ ವಿದ್ಯಾರ್ಥಿಗಳಿಗೆ ಈ ಕಾಲೇಜು ಜ್ಞಾನ ದೇಗುಲವಾಗಿದೆ."
>
> ■ ಗೀತಾ ಮಿಸ್ಕಿನ್
> ವಿದ್ಯಾರ್ಥಿನಿಯ ಅಭಿಪ್ರಾಯ

# ಸ್ವ ಹಿತವಿಲ್ಲದ ಹಿತಚಿಂತಕ ಫ.ಗು.ಹಳಕಟ್ಟಿ :ಪ್ರಭಾಕರ ಖೇಡದ

■ ಉದಯರಶ್ಮಿ ದಿನಪತ್ರಿಕೆ



ಬಸವನಬಾಗೇವಾಡಿ: ವಚನ ಸಾಹಿತ್ಯ ಸಂಶೋಧನೆ ಮತ್ತು ಮುದ್ರಣಕ್ಕಾಗಿ ಸಾಲಕ್ಕೆ ಅಂಜದೇ ಕಾಲಕ್ಕೆ ನಂಜದೇ ಇಡೀ ತಮ್ಮ ಬದುಕನ್ನು ವಚನ ಸಾಹಿತ್ಯ ಸಂರಕ್ಷಣೆಗಾಗಿ ಸವೆಸಿ 250ಕ್ಕೂ ಹೆಚ್ಚು ಶರಣರ ವಚನಗಳನ್ನು ಊರೂರು ಸುತ್ತಿ ಸಂಗ್ರಹಿಸಿ ಪ್ರಕಟಿಸಿ ನಮಗೆ ಕೊಟ್ಟು ಹೋದವರು ವಚನ ಪಿತಾಮಹ ಡಾ.ಫ.ಗು.ಹಳಕಟ್ಟಿ ಇವರು ಸದಾ ಸ್ಮರಣೀಯರಾಗಿದ್ದಾರೆ ಎಂದು ಕರ್ನಾಟಕ ಚುಟುಕು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಪ್ರಭಾಕರ ಖೇಡದ ಹೇಳಿದರು.

ಪಟ್ಟಣದ ತಹಸೀಲ್ದಾರ ಕಚೇರಿಯ ಸಭಾಂಗಣದಲ್ಲಿ ತಾಲೂಕಾಡಳಿತವು ಗುರುವಾರ ಹಮ್ಮಿಕೊಂಡಿದ್ದ ಡಾ.ಫ.ಗು.ಹಳಕಟ್ಟಿ ಅವರ 146 ಜಯಂತೋತ್ಸವ, ವಚನ ಸಂರಕ್ಷಣಾ ದಿನಾಚರಣೆಯ ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸಕರಾಗಿ ಮಾತನಾಡಿದ ಅವರು, ವಚನ ಸಾಹಿತ್ಯ ಸಂರಕ್ಷಣೆಯೊಂದಿಗೆ ವಿಜಯಪುರ ಜಿಲ್ಲೆಯ ವಿಕಾಸಕ್ಕೆ ಅವರು ಕೊಟ್ಟ ಕೊಡುಗೆ ಅಪಾರ. ಶಿಕ್ಷಣ ಅದರಲ್ಲೂ ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಅವರು ತೋರುತ್ತಿದ್ದ ಕಾಳಜಿ, ಬರಗಾಲ ನಿವಾರಣ ಕೇಂದ್ರ,ಪ್ರತಿಷ್ಠಿತ ಬಿ.ಎಲ್.ಡಿ.ಇ. ಶಿಕ್ಷಣ ಸಂಸ್ಥೆ ಹಾಗೂ ಶ್ರೀಸಿದ್ದೇಶ್ವರ ಸಹಕಾರಿ ಬ್ಯಾಂಕ್, ಎಸ್.ಎಸ್. ಹೈಸ್ಕೂಲ್ ಹಾಗೂ ವಿಜಯ ಕಾಲೇಜ ಸೇರಿದಂತೆ ಅನೇಕ ಸಹಕಾರಿ ಸಂಘ ಸಂಸ್ಥೆಗಳ ಉದಯಕ್ಕೆ ಮೂಲ ಕಾರಣರಾದವರು. ವಕೀಲರಾಗಿ ಶ್ರದ್ಧೆ,ತ್ಯಾಗ, ಶುದ್ಧ ಹಸ್ತ ಒಂದು ಕಡೆ ಆದರೆ ಹಸಿವು, ಪರಹಿತಕ್ಕಾಗಿ ಸ್ವಂತ ಮನೆ ಮಾರಿದ್ದು, ಕೈಗೆ ಬಂದ ಮಗ ಮರಣಿಸಿದ್ದು ಇನ್ನೊಂದು ಕಡೆ. ಇದಾವುದಕ್ಕೂ ಧೃತಿಗೆಡದೇ 20ನೇ ಶತಮಾನದ ಶರಣರಂತೆ ಬಾಳಿ ತೋರಿಸಿದವರು ಪರಮಪುರುಷ ರಾವ್ ಬಹದ್ದೂರ್ ಡಾ. ಫ. ಗು.ಹಳಕಟ್ಟಿಯವರು. ಹರಕು ಅಂಗಿಯ ಮೇಲೆ ಕರಿಕೋಟು. ಆಸರೆಗೆ ಬಣ್ಣ ಮಾಸಿದ ಸೈಕಲ್. ವಾಸಿಸಲು ಕೊನೆಯವರೆಗೂ ಬಾಡಿಗೆ ಮನೆ ಇದು ಅವರ ಸರಳ ವ್ಯಕ್ತಿತ್ವಕ್ಕೆ ಹಿಡಿದ ಕನ್ನಡಿಯಾಗಿತ್ತು ಎಂದು ಅಭಿಪ್ರಾಯಪಟ್ಟರು.

ಡಾ.ಫ.ಗು.ಹಳಕಟ್ಟಿ ಅವರ ಭಾವಚಿತ್ರಕ್ಕೆ ನಮನ ಸಲ್ಲಿಸಿದ ತಹಸೀಲ್ದಾರ ವೈ.ಎಸ್.ಸೋಮನಕಟ್ಟಿ ಮಾತನಾಡಿ, ಹಳಕಟ್ಟಿ ಅವರದು ಸರಳ ಜೀವನ ಉನ್ನತ ವಿಚಾರವಾಗಿತ್ತು. ಸರ್ಕಾರ ಅವರ ಜಯಂತಿ ದಿನವನ್ನು ವಚನ ಸಂರಕ್ಷಣಾ ದಿನವನ್ನಾಗಿ ಆಚರಿಸುತ್ತಿರುವುದು ಸ್ತುತ್ಯವಾಗಿದೆ ಎಂದರು.

ಪೂಜಾಸ್ಮರಣೆಯಲ್ಲಿ ಎಸ್ ಕೆ ಸೋಮನಕಟ್ಟಿ, ವಿವೇಕಾನಂದ ಕಲ್ಯಾಣಶೆಟ್ಟಿ,ಬಿ.ಎಸ್.ಪಟ್ಟಣದ,.ಶ್ರೀಶೈಲ ಶಿರಗುಪ್ಪಿ, ಕಾಶಿನಾಥ ಅವಟಿ,ಐ.ಜಿ. ಬೆಕಿನಾಳ, ಲಕ್ಷ್ಮಣ ಮೇತ್ರಿ, ಶಿವಾನಂದ ತುಬಾಕಿ, ವಿಲಾಸ ಜಾಡರ, ಎನ್. ಎನ್. ಹೊಸಮನಿ, ತಹಸೀಲ್ದಾರ ಕಚೇರಿ ಸಿಬ್ಬಂದಿ ಇತರರು ಇದ್ದರು.

ಶ್ರೀಶೈಲ ಶಿರಗುಪ್ಪಿ ಸ್ವಾಗತಿಸಿದರು. ಸಿದ್ದು ಶಿರಶ್ಯಾಡ ನಿರೂಪಿಸಿದರು. ಎಸ್. ಬಿ. ಅಂಕದ ವಂದಿಸಿದರು.

## ಸಿಂದಗಿಯಲ್ಲಿ ಕೆಆರ್‌ಎಸ್ ಪಕ್ಷದಿಂದ ವಿನೂತನ ಹೋರಾಟ । ರಾಜ್ಯ ಸಂಘಟನಾ ಕಾರ್ಯದರ್ಶಿ ಶಿವಾನಂದ ಯಡಹಳ್ಳಿ ಆಕ್ರೋಶ

# ಸರ್ಕಾರಿ ಶಾಲೆ ಅವ್ಯವಸ್ಥೆ ಖಂಡಿಸಿ ದೀರ್ಘದಂಡ ನಮಸ್ಕಾರ!

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ಸರ್ಕಾರಿ ಶಾಲೆಯಲ್ಲಿನ ಮೂಲಸೌಕರ್ಯಗಳ ಕೊರತೆ, ವಿದ್ಯಾರ್ಥಿಗಳಿಗೆ ಸಮರ್ಪಕ ಸೌಲಭ್ಯಗಳ ಅಭಾವ ಹಾಗೂ ಶಿಕ್ಷಣ ಇಲಾಖೆಯ ನಿರ್ಲಕ್ಷ್ಯವನ್ನು ಖಂಡಿಸಿ ಸಿಂದಗಿ ತಾಲೂಕು ಘಟಕದ ಕೆಆರ್‌ಎಸ್ ಪಕ್ಷದ ವತಿಯಿಂದ ವಿನೂತನವಾಗಿ ದೀಡ ದಂಡ ನಮಸ್ಕಾರ ಹೋರಾಟ ನಡೆಸಲಾಯಿತು.

ನಗರದ ಟಿಪ್ಪು ಸುಲ್ತಾನ್ ವೃತ್ತದಿಂದ ಡಾ.ಬಿ.ಆರ್. ಅಂಬೇಡ್ಕರ್ ವೃತ್ತದ ಮಾರ್ಗವಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಲಯದವರೆಗೆ ಹೋರಾಟಗಾರರು ಸರ್ಕಾರಿ ಶಾಲೆಯ ಸಮಸ್ಯೆಗಳನ್ನು ತಕ್ಷಣ ಪರಿಹರಿಸುವಂತೆ ಆಗ್ರಹಿಸಿ ದೀಡ ದಂಡ ನಮಸ್ಕಾರ ಸಲ್ಲಿಸುವ ಮೂಲಕ ತಮ್ಮ ಆಕ್ರೋಶವನ್ನು ವ್ಯಕ್ತಪಡಿಸಿದರು.

ಶಾಲಾ ಕಟ್ಟಡಗಳ ದುರಸ್ಥಿತಿ, ಶೌಚಾಲಯಗಳ ಕೊರತೆ, ಕುಡಿಯುವ ನೀರಿನ ಸಮಸ್ಯೆ, ಅಗತ್ಯ ಶಿಕ್ಷಕರ ನೇಮಕ ಹಾಗೂ ವಿದ್ಯಾರ್ಥಿಗಳಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವಂತೆ ಸರ್ಕಾರವನ್ನು ಒತ್ತಾಯಿಸಿದರು.

ಈ ವೇಳೆ ಕೆಆರ್‌ಎಸ್ ಪಕ್ಷದ ರಾಜ್ಯ ಸಂಘಟನಾ ಕಾರ್ಯದರ್ಶಿ ಶಿವಾನಂದ ಯಡಹಳ್ಳಿ ಮಾತನಾಡಿ, ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸರ್ಕಾರ ಹೆಚ್ಚಿನ ಆದ್ಯತೆ ನೀಡಬೇಕು. ಗ್ರಾಮೀಣ ಭಾಗದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ದೊರೆಯುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು. ಸಮಸ್ಯೆಗಳನ್ನು ತಕ್ಷಣ ಪರಿಹರಿಸದಿದ್ದರೆ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಹಮ್ಮಿಕೊಳ್ಳುವುದಾಗಿ ಎಚ್ಚರಿಕೆ ನೀಡಿದರು.

ಹೋರಾಟದಲ್ಲಿ ಗೌರವಾಧ್ಯಕ್ಷ ಸಂಗಣ್ಣ ಬ್ಯಾಕೋಡ, ಸಿಂದಗಿ ತಾಲೂಕಾಧ್ಯಕ್ಷ ನಬಿ ಹುಣಶ್ಯಾಳ, ಆಲಮೇಲ ತಾಲೂಕಾಧ್ಯಕ್ಷ ಮಹಿಬೂಬ ತಾಂಬೊಳ್ಳಿ, ಕಾರ್ಯದರ್ಶಿ ಮಸ್ತಫಾ ಬಳಗಾನೂರ, ಸಂಗಮೇಶ ಪತ್ತಾರ, ಜಗದೀಶ ಕಲಬುರ್ಗಿ ಸೇರಿದಂತೆ ಪಕ್ಷದ ತಾಲೂಕು ಪದಾಧಿಕಾರಿಗಳು, ಕಾರ್ಯಕರ್ತರು ಭಾಗವಹಿಸಿ ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ತಮ್ಮ ಪ್ರತಿಭಟನೆಯನ್ನು ವ್ಯಕ್ತಪಡಿಸಿದರು.

# ಬೆಳೆ ವಿವರ ಆಪ್‌ನಲ್ಲಿ ದಾಖಲಿಸಿ :ಡಿಸಿ ಡಾ.ಆನಂದ ಕೆ

■ ಉದಯರಶ್ಮಿ ದಿನಗಳಲ್ಲಿ



ವಿಜಯಪುರ: 2026–27ನೇ ಸಾಲಿನ ಮುಂಗಾರು ಹಂಗಾಮಿನಲ್ಲಿ ಜಿಲ್ಲೆಯ ರೈತರು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರಗಳನ್ನು ಬೆಳೆ ಸಮೀಕ್ಷೆ ಮೊಬೈಲ್‌ಆಪ್ ನಲ್ಲಿ ದಾಖಲಿಸಬೇಕೆಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ ಅವರು ರೈತರಲ್ಲಿ ಮನವಿ ಮಾಡಿದ್ದಾರೆ.

ರೈತರು ಗೂಗಲ್ ಪ್ಲೇ ಸ್ಟೋರ್ ಅಥವಾ ಕ್ಯೂ ಆರ್ ಕೋಡ್ ನಿಂದ ಮುಂಗಾರು ಬೆಳೆ ಸಮೀಕ್ಷೆ ಪ್ ಡೌನಲೋಡ್ ಮಾಡಿಕೊಂಡು, ಸ್ವತ ತಾವೇ ಬೆಳೆ ಸಮೀಕ್ಷೆ ಮಾಡಿ ತಮ್ಮ ಜಮೀನಿನಲ್ಲಿ ತಾವು ಬೆಳೆದ ಬೆಳೆ ವಿವರಗಳನ್ನು ದಾಖಲಿಸಬಹುದು.

ಬೆಳೆ ಸಮೀಕ್ಷೆ ತಂತ್ರಾಂಶ ಆಪ್ ತಂತ್ರಾಂಶನಲ್ಲಿ ದಾಖಲಾಗುವ ಮಾಹಿತಿಯನ್ನು ಬೆಳೆ ಸಾಲ, ಬೆಳೆ ವಿಮೆ,ಬೆಂಬಲ ಬೆಲೆ, ಖರೀದಿ,ಬೆಳೆ ಪರಿಹಾರ, ಪಹಣಿಯಲ್ಲಿ ಬೆಳೆ ವಿವರಗಳನ್ನು ದಾಖಲಿಸಲು ಮತ್ತು ವಿವಿಧ ಇಲಾಖೆಗಳ ಸವಲತ್ತುಗಳನ್ನು ಪಡೆಯಲು ಉಪಯೋಗಿಸಲಾಗುವುದು.

ಈ ನಿಟ್ಟಿನಲ್ಲಿ ಸ್ವತ: ರೈತರೇ ತಮ್ಮ ಮೊಬೈಲ್ ತಂತ್ರಾಂಶ ಪ್ ಮೂಲಕ ಸಕಾಲಕ್ಕೆ ಬೆಳೆ ವಿವರಗಳನ್ನು ತಂತ್ರಾಂಶದಲ್ಲಿ ಅಪಲೋಡ್ ಮಾಡುವದರಿಂದ ನ್ಯೂನ್ಯತೆಗಳನ್ನು ಕಡಿಮೆ ಮಾಡಬಹುದು ಹಾಗೂ ಸೌಲಭ್ಯಗಳಿಂದ ವಂಚಿತರಾಗುವುದನ್ನು ತಪ್ಪಿಸಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ. ಬರುವ ಆಗಸ್ಟ್ 31ರೊಳಗಾಗಿ ರೈತರು ಸ್ವತ: ತಮ್ಮ ಜಮೀನಿನ ಬೆಳೆ ಸಮೀಕ್ಷೆ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಒಂದು ವೇಳೆ ರೈತರು ತಮ್ಮ ಜಮೀನಿನ ಬೆಳೆ ಸಮೀಕ್ಷೆಯನ್ನು ತಾವೇ ಕೈಗೊಳ್ಳಲು ಸಾಧ್ಯವಾಗದಿದ್ದಲ್ಲಿ ತಮ್ಮ ಜಮೀನಿನಲ್ಲಿ ಬೆಳೆದ ವಿವಿಧ ಬೆಳೆಗಳ ಮಾಹಿತಿಯನ್ನು ಖಾಸಗಿ ನಿವಾಸಿಗಳ ಮುಖಾಂತರ ಖುದ್ದಾಗಿ ಕ್ಷೇತ್ರದಲ್ಲಿದ್ದು ದಿನಾಂಕ ಆಗಸ್ಟ್ 15 ರಿಂದ ಸೆಪ್ಟೆಂಬರ್ 30 ರೊಳಗಾಗಿ ನಿಖರವಾಗಿ ದಾಖಲಿಸಬಹುದಾಗಿದೆ ಎಂದವರು ತಿಳಿಸಿದ್ದಾರೆ.ಜಿಲ್ಲೆಯ ರೈತರು ಈ ಯೋಜನೆಯ ಸದುಪಯೋಗ ಪಡೆದುಕೊಂಡು ತಮ್ಮ ಜಮೀನಿನಲ್ಲಿ ಬೆಳೆದ ಬೆಳೆ ವಿವರಗಳನ್ನು ನಿಗದಿತ ಸಮಯದೊಳಗೆ ದಾಖಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ತಮ್ಮ ಗ್ರಾಮಕ್ಕೆ ನಿಯೋಜಿಸಲಾದ ಖಾಸಗಿ ನಿವಾಸಿ (ಪಿಆರ್)ಗಳನ್ನು ಅಥ–'ವಾ ಕೃಷಿ, ತೋಟಗಾರಿಕೆ, ಕಂದಾಯ ಇಲಾಖೆಯ ಅಧಿಕಾರಿಗಳನ್ನು ಅಥವಾ ಸಹಾಯವಾಣಿ ಸಂಖ್ಯೆಗೆ 18004253553 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಗ್ರಾಮೀಣ ಕೂಲಿಕಾರ್ಮಿಕರಿಗೆ ಯೋಜನೆಯಿಂದ ಮತ್ತಷ್ಟು ಅನುಕೂಲ । ಜಿಪಂ ಸಿಇಒ ರಿಷಿ ಆನಂದ್ ಹೇಳಿಕೆ

# ವಿಬಿ–ಜಿ ರಾಮ್–ಜಿ ಯೋಜನೆ: ಪ್ರತಿ ದಿನ ಕೂಲಿ ದರ 382 ರೂ. ಹೆಚ್ಚಳ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ವಿಬಿ–ಜಿ ರಾಮ್–ಜಿ ಯೋಜನೆಯಡಿ ಕೂಲಿ ದರವನ್ನು 370 ರಿಂದ 382 ರೂ ಹೆಚ್ಚಿಸಲಾಗಿದೆ. ಮಹಿಳೆ ಮತ್ತು ಪುರುಷ ಕೂಲಿಕಾರ್ಮಿಕರಿಗೆ ಸಮಾನ ಕೂಲಿ ನೀಡುವ ವ್ಯವಸ್ಥೆ ಮುಂದುವರಿಯಲಿದ್ದು, ಕೂಲಿ ಮೊತ್ತವನ್ನು ಕೆಲಸ ಪೂರ್ಣಗೊಂಡ ದಿನಾಂಕದಿಂದ ಗರಿಷ್ಠ 15 ದಿನಗಳೊಳಗೆ ನೇರವಾಗಿ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುವುದು ಎಂದು ಸಿಇಒ ತಿಳಿಸಿದ್ದಾರೆ.

ವಿಬಿ–ಜಿ ರಾಮ್–ಜಿ ಯೋಜನೆಯು ಜುಲೈ 1ರಿಂದ ದೇಶಾದ್ಯಂತ ಜಾರಿಗೊಂಡಿದ್ದು, ಜಿಲ್ಲೆಯಲ್ಲೂ ಯೋಜನೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಅಗತ್ಯವಿರುವ ಎಲ್ಲ ರೀತಿಯ ಪೂರ್ವ ಸಿದ್ಧತೆ ಕೈಗೊಳ್ಳಲಾಗಿದೆ ಎಂದು ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ರಿಷಿ ಆನಂದ ಅವರು ತಿಳಿಸಿದ್ದಾರೆ.

ಗ್ರಾಮೀಣ ಕುಟುಂಬಗಳಿಗೆ ಉದ್ಯೋಗ ಭದ್ರತೆ ಒದಗಿಸುವುದರ ಜೊತೆಗೆ ಗ್ರಾಮಗಳ ಸಮಗ್ರ, ಗುಣಮಟ್ಟದ ಹಾಗೂ ಸ್ಯಾಚುರೇಷನ್ ಆಧಾರಿತ ಅಭಿವೃದ್ಧಿಯನ್ನು ಸಾಧಿಸುವ ಉದ್ದೇಶದಿಂದ ಈ ಹೊಸ ಯೋಜನೆ ಜಾರಿಗೊಂಡಿದೆ. ಈ ಯೋಜನೆಯಡಿ ಅರ್ಹ ಗ್ರಾಮೀಣ ಕುಟುಂಬಗಳಿಗೆ ಹಿಂದೆ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ನೀಡಲಾಗುತ್ತಿದ್ದ 100 ಮಾನವ ದಿನಗಳ ಬದಲಾಗಿ 125 ಮಾನವ ದಿನಗಳ ಕಡ್ಡಾಯ ಉದ್ಯೋಗಾವಕಾಶ ಕಲ್ಪಿಸಲಾಗಿದ್ದು, ಗ್ರಾಮೀಣ ಜನರ ಜೀವನಮಟ್ಟ ಸುಧಾರಿಸಲು ಹಾಗೂ ಗ್ರಾಮಗಳ ಮೂಲಸೌಕರ್ಯ ಅಭಿವೃದ್ಧಿಗೆ ಹೊಸ ಆಯಾಮ ನೀಡಲಾಗುತ್ತಿದೆ ಎಂದು ರಿಷಿ ಆನಂದ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂಡಿ ಸಬ್ ರಜಿಸ್ಟಾರ ಕಚೇರಿ: 2ನೇ ದಿನಕ್ಕೆ ಕಾಲಿಟ್ಟ ಲೋಕಾ ದಾಳಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಪಟ್ಟಣದ ಉಪನೋಂದಣಾಧಿಕಾರಿ ಹಾಗೂ ವಿವಾಹ ನೋಂದಣಾಧಿಕಾರಿಗಳ ಕಚೇರಿಯ ಮೇಲೆ ಲೋಕಾಯುಕ್ತ ಅಧಿಕಾರಿಗಳು ನಡೆಸಿರುವ ಮಿಂಚಿನ ದಾಳಿ ಇದೀಗ ಎರಡನೇ ದಿನಕ್ಕೆ ಕಾಲಿಟ್ಟಿದೆ.

ಲೋಕಾಯುಕ್ತ ಅಧಿಕಾರಿಗಳು ಪ್ರಮುಖವಾಗಿ ಕಡತಗಳನ್ನು ಜಾಲಾಡಿದಾಗ ಕಚೇರಿಯಲ್ಲಿ ಸಾರ್ವಜನಿಕರ ಬರೋಬ್ಬರಿ 2,265 ಪೇಡಿ ಪತ್ರಗಳನ್ನು ಯಾವುದೇ ಸೂಕ್ತ ಕಾರಣಗಳಿಲ್ಲದೆ ಬಾಕಿ (ಪೆಂಡಿಂಗ್) ಇಡಲಾಗಿದೆ. ಪೇಡಿ ಪತ್ರಗಳನ್ನು ತಹಸೀಲ್ದಾರರ ಗಮನಕ್ಕೆ ತರಬೇಕಾಗಿತ್ತು. ಈ ಅಧಿಕಾರಿಗಳು ಜನರನ್ನು ಅಲೆದಾಡಿಸುವ ಉದ್ದೇಶದಿಂದ ತಹಸೀಲ್ದಾರ್ ಅವರಿಗೂ ಯಾವುದೇ ಮಾಹಿತಿ ನೀಡದೆ, ಎಲ್ಲಾ ಪೇಡಿ ಪತ್ರಗಳನ್ನು ತಮ್ಮ ಲಾಗಿನ್‌ನಲ್ಲೇ ಅಕ್ರಮವಾಗಿ ಇಟ್ಟುಕೊಂಡಿರುವುದು ಪತ್ತೆಯಾಗಿದೆ.

ಇಸಿ ಮತ್ತು ಮದುವೆ ಪ್ರಮಾಣಪತ್ರಗಳ ತಡೆಹಿಡಿತ: ಸಾರ್ವಜನಿಕರಿಗೆ ಅತ್ಯಂತ ತುರ್ತಾಗಿ ಬೇಕಾಗುವ ಇಸಿ ಮತ್ತು ವಿವಾಹ ನೋಂದಣಿ ಪ್ರಮಾಣಪತ್ರಗಳನ್ನು ಕಾರಣವಿಲ್ಲದೆ ಎರಡು ತಿಂಗಳುಗಳ ಕಾಲ ಪೆಂಡಿಂಗ್ ಇಡಲಾಗಿದೆ. ಇದರ ಹಿಂದೆ ದೊಡ್ಡ ಮಟ್ಟದ ಲಂಚದ ಆಮಿಷವಿರುವ ಶಂಕೆ ವ್ಯಕ್ತವಾಗಿದೆ.

ಸರ್ಕಾರದ ನಿಯಮದಂತೆ ನೋಂದಣಿ ಶುಲ್ಕ ಮತ್ತು ಸ್ಕ್ಯಾನಿಂಗ್ ಶುಲ್ಕಗಳು ಆನ್‌ಲೈನ್ ಮೂಲಕವೇ ಪಾವತಿಯಾಗುತ್ತವೆ. ಆದರೆ ಲೋಕಾಯುಕ್ತ ಅಧಿಕಾರಿಗಳು ಕಚೇರಿಯ ಹಾರ್ಡ್‌ಪ್ರತಿಯ ಪುಸ್ತಕ (ಲೆಡ್ಜರ್) ಮತ್ತು ಆನ್‌ಲೈನ್ ದಾಖಲೆಗಳನ್ನು ಹೋಲಿಕೆ ಮಾಡಿದಾಗ, ಎರಡೂ ಕಡೆ ಬೇರೆ ಬೇರೆ ಲೆಕ್ಕಗಳು ಸಿಕ್ಕಿವೆ. ಹಣದ ಮರುಪಾವತಿ ಮತ್ತು ಸಂಗ್ರಹಣೆಯಲ್ಲಿ ಗೋಲ್ಮಾಲ್ ನಡೆದಿರುವುದು ಇದರಿಂದ ತಿಳಿಯುತ್ತಿದೆ.

ನೀರಾವರಿ ಜಮೀನಿಗೆ ಒಣ ಬೇಸಾಯದ ಮೌಲ್ಯ: ಸರ್ಕಾರಕ್ಕೆ ಕೋಟ್ಯಂತರ ರೂಪಾಯಿ ನಷ್ಟ!– ಎಲ್ಲಕ್ಕಿಂತ ದೊಡ್ಡ ಹಗರಣ ಎಂದರೆ, ಕೋಟಿ ಕೋಟಿ ಬೆಲೆಬಾಳುವ ನೀರಾವರಿ ಜಮೀನುಗಳಿಗೆ ಒಣ ಬೇಸಾಯದ ಮೌಲ್ಯವನ್ನು ತೋರಿಸಿ ಖರೀದಿ ಪತ್ರಗಳನ್ನು ಸಿದ್ಧಪಡಿಸಲಾಗಿದೆ. ತಮಗೆ ಸಿಗುವ ಕಮಿಷನ್ ಆಸೆಗಾಗಿ ಅಧಿಕಾರಿಗಳು ಸರ್ಕಾರದ ಬೊಕ್ಕಸಕ್ಕೆ ಕೋಟ್ಯಂತರ ರೂಪಾಯಿ ತೆರಿಗೆ ವಂಚನೆ ಮಾಡಿರುವುದು ದಾಖಲೆ ಸಮೇತ ಲೋಕಾಯುಕ್ತರ ಕೈಗೆ ಸಿಕ್ಕಿಬಿದ್ದಿದೆ.

ತನಿಖೆ ಮುಂದುವರಿಕೆ: ಸದ್ಯ ಕಚೇರಿಯ ಸಂಪೂರ್ಣ ನಿಯಂತ್ರಣ ತನಿಖಾಧಿಕಾರಿಗಳ ಕೈಯಲ್ಲಿದ್ದು, ಇನ್ನು ಹತ್ತಾರು ಕರಾಳ ದಂಧೆಗಳು ಹೊರಬರುವ ಸಾಧ್ಯತೆ ಇದೆ.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR